ಸಂಪುಟ : 11 ಸಂಚಿಕೆ: 124 ಪುಟ : 4+2 ಬೆಲೆ: 3.00 ಬುಧವಾರ ಜೂನ್ 17 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 124 Pages : 4+2 Price : 3.00 Wednesday june 17 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂಟರ್ನ್ ಹೆಲ್ತ್ ಇನ್ಸ್‌ಪೆಕ್ಟರ್ ಹುದ್ದೆಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ಅವರ ನಿರ್ದೇಶನದಂತೆ ರೋಣ ಪುರಸಭೆಯಲ್ಲಿ ಒಂದು ಇಂಟರ್ನ್ ಹೆಲ್ತ್ ಇನ್ಸ್‌ಪೆಕ್ಟರ್ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ.

ಒಂದು ವರ್ಷದ ಅವಧಿಗೆ ಕೌಶಲ್ಯ ಮತ್ತು ಸಾಮರ್ಥ್ಯ ವೃದ್ಧಿಪಡಿಸುವ ಉದ್ದೇಶದಿಂದ ಈ ಹುದ್ದೆಗೆ ನೇಮಕಾತಿ ಮಾಡಲಾಗುತ್ತಿದ್ದು, ಇದು ತಾತ್ಕಾಲಿಕ ತರಬೇತಿ (ಇಂಟರ್ನ್‌ಶಿಪ್) ಕಾರ್ಯಕ್ರಮವಾಗಿರುತ್ತದೆ. ಈ ನೇಮಕಾತಿಯಿಂದ ಯಾವುದೇ ರೀತಿಯ ಖಾಯಂ ಉದ್ಯೋಗಕ್ಕೆ ಅವಕಾಶ ಇರುವುದಿಲ್ಲ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಜೂನ್ 24ರೊಳಗೆ ಟಿಯುಎಲ್‌ಐಪಿ (TULIP) ಇಂಟರ್ನ್‌ಶಿಪ್ ಕಾರ್ಯಕ್ರಮದ ವೆಬ್‌ಸೈಟ್‌ನಲ್ಲಿ ನೋಂದಾಯಿಸಿಕೊಳ್ಳಬೇಕು. ಆಯ್ಕೆಯಾದ ಅಭ್ಯರ್ಥಿಗಳು ಕರ್ತವ್ಯ ನಿರ್ವಹಿಸಿದ ಬಳಿಕ ಕಚೇರಿಯಿಂದ ಪ್ರಮಾಣಪತ್ರ ನೀಡಲಾಗುವುದು.

ಸ್ಥಳೀಯ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು ಎಂದು ರೋಣ ಪುರಸಭೆಯ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂ.19ರಂದು ಬೆಟಗೇರಿಯಲ್ಲಿ ವಿದ್ಯುತ್ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಗದಗ

110 ಕೆವಿ ಬೆಟಗೇರಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳಲಾಗುತ್ತಿರುವ ಹಿನ್ನೆಲೆಯಲ್ಲಿ ಜೂನ್ 19ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ. ಈ ಅವಧಿಯಲ್ಲಿ 110 ಕೆವಿ ಬೆಟಗೇರಿ ಕೇಂದ್ರದಿಂದ ವಿದ್ಯುತ್ ಪಡೆಯುತ್ತಿರುವ ನಗರ ಹಾಗೂ ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ಸರಬರಾಜು ಸ್ಥಗಿತಗೊಳ್ಳಲಿದೆ. ಎನ್‌ಜೆವೈ, ಸೋಲಾರ್, ಕೆಐಎಡಿಬಿ ಕೈಗಾರಿಕಾ ಮತ್ತು ಇಐಪಿ ಫೀಡರ್‌ಗಳಿಗೆ ಸಂಪರ್ಕ ಹೊಂದಿರುವ ಗ್ರಾಹಕರಿಗೂ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ಆದ್ದರಿಂದ ಸಾರ್ವಜನಿಕರು ಹಾಗೂ ಗ್ರಾಹಕರು ಸಹಕರಿಸುವಂತೆ ಹೆಸ್ಕಾಂ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೇಸ್ ಬುಕ್, ಔಐಕ್ಸ್‌ನಲ್ಲಿ ಬೈಕ್ ಖರೀದಿಸುವ ಮುನ್ನ ಎಚ್ಚರ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಫೇಸ್‌ಬುಕ್ ಮತ್ತು ಓಎಲ್‌ಎಕ್ಸ್‌ನಲ್ಲಿ ಜಾಹೀರಾತು ನೀಡಿ ಕಳವು ಮಾಡಿದ ಬೈಕ್‌ಗಳನ್ನು ಮಾರಾಟ ಮಾಡುತ್ತಿದ್ದ ಆರೋಪಿಯನ್ನು ಜಯನಗರ ಪೊಲೀಸರು ಬಂಧಿಸಿದ್ದಾರೆ. ಬಂಧಿತ ಆರೋಪಿಯನ್ನು ಸಲ್ಮಾನ್ ಮೆಹಬೂಬ್ @ ಬಿಲಾಲ್ ಎಂದು ಗುರುತಿಸಲಾಗಿದೆ. ಆರೋಪಿ ನಗರದ ವಿವಿಧ ಪ್ರದೇಶಗಳಲ್ಲಿ ಪಾರ್ಕಿಂಗ್ ಮಾಡಿದ್ದ ಬೈಕ್‌ಗಳನ್ನು ನಕಲಿ ಕೀ ಬಳಸಿ ಕಳವು ಮಾಡುತ್ತಿದ್ದ ಎನ್ನಲಾಗಿದೆ. ಕಳವು ಮಾಡಿದ ಬೈಕ್‌ಗಳ ಮೂಲ ಗುರುತು ಸಿಗದಂತೆ ಅವುಗಳ ನಂಬರ್ ಪ್ಲೇಟ್ ಬದಲಾಯಿಸಿ, ಬಳಿಕ ಫೇಸ್‌ಬುಕ್ ಹಾಗೂ ಓಎಲ್‌ಎಕ್ಸ್‌ನಲ್ಲಿ ಜಾಹೀರಾತು ನೀಡಿ ಕಡಿಮೆ ಬೆಲೆಗೆ ಮಾರಾಟ ಮಾಡುತ್ತಿದ್ದನು ಎಂದು ತನಿಖೆಯಲ್ಲಿ ತಿಳಿದುಬಂದಿದೆ.

ಜಯನಗರ ಪೊಲೀಸರು ಕಾರ್ಯಾಚರಣೆ ನಡೆಸಿ ಆರೋಪಿಯನ್ನು ಬಂಧಿಸಿದ್ದು, ಆತನಿಂದ ₹22 ಲಕ್ಷ ಮೌಲ್ಯದ 37 ಬೈಕ್‌ಗಳನ್ನು ವಶಪಡಿಸಿಕೊಂಡಿದ್ದಾರೆ.


### ಗದಗದಲ್ಲಿ ಸಾವಿರಾರು ಅಭಿಮಾನಿಗಳ ಬೃಹತ್ ಶಕ್ತಿ ಪ್ರದರ್ಶನ-ಕಾಂಗ್ರೆಸ್ ಹೈಕಮಾಂಡ್‌ಗೆ ಸ್ಪಷ್ಟ ಸಂದೇಶ

# ಎಚ್.ಕೆ. ಪಾಟೀಲ ಕಡೆಗಣನೆಗೆ ಆಕ್ರೋಶ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಸಮಗ್ರ ಅಭಿವೃದ್ಧಿಯ ದೃಷ್ಟಿಯಿಂದ ಹಿರಿಯ ಕಾಂಗ್ರೆಸ್ ನಾಯಕ, ಶಾಸಕ ಎಚ್.ಕೆ. ಪಾಟೀಲರಿಗೆ ಮುಂಬರುವ ಸಚಿವ ಸಂಪುಟ ವಿಸ್ತರಣೆಯಲ್ಲಿ ಸೂಕ್ತ ಸ್ಥಾನ ನೀಡಬೇಕು ಎಂದು ಆಗ್ರಹಿಸಿ ಮಂಗಳವಾರ ಗದಗ ನಗರದಲ್ಲಿ ಅಭಿಮಾನಿಗಳು, ಕಾಂಗ್ರೆಸ್ ಕಾರ್ಯಕರ್ತರು ಹಾಗೂ ವಿವಿಧ ಸಂಘಟನೆಗಳ ಮುಖಂಡರು ಬೃಹತ್ ಪ್ರತಿಭಟನೆ ನಡೆಸಿದರು.

ದಿ. ಕಾಟನ್ ಸೇಲ್ ಸೊಸೈಟಿ ಆವರಣದಿಂದ ಆರಂಭವಾದ ಮೆರವಣಿಗೆ ಭೂಮರಡ್ಡಿ ಸರ್ಕಲ್, ಮಹಾತ್ಮ ಗಾಂಧಿ ಸರ್ಕಲ್, ಮಹೇಂದ್ರಕರ್ ಸರ್ಕಲ್, ಟಾಂಗಾ ಕೂಟ, ಬಸವೇಶ್ವರ ಸರ್ಕಲ್, ಪಂಚರ ಹೊಂಡ ಹಾಗೂ ಐತಿಹಾಸಿಕ ಜೋಡ ಮಾರುತಿ ದೇವಸ್ಥಾನದ ಮಾರ್ಗವಾಗಿ ಮುಳಗುಂದ ನಾಕಾವರೆಗೆ ಸಾಗಿತು. ಮೆರವಣಿಗೆಯುದ್ದಕ್ಕೂ ಕಾರ್ಯಕರ್ತರು ಎಚ್.ಕೆ. ಪಾಟೀಲರ ಪರ ಘೋಷಣೆಗಳನ್ನು ಕೂಗಿ ಸಚಿವ ಸ್ಥಾನ ನೀಡುವಂತೆ ಕಾಂಗ್ರೆಸ್ ಹೈಕಮಾಂಡ್‌ಗೆ ಒತ್ತಾಯಿಸಿದರು.





ಗದಗ-ಬೆಟಗೇರಿ ಅವಳಿ ನಗರದ 35 ವಾರ್ಡ್‌ಗಳ ಜೊತೆಗೆ ಗದಗ ವಿಧಾನಸಭಾ ಕ್ಷೇತ್ರದ ಗ್ರಾಮೀಣ ಭಾಗಗಳಿಂದಲೂ ಅಪಾರ ಸಂಖ್ಯೆಯಲ್ಲಿ ಜನರು ಆಗಮಿಸಿದ್ದರು. ಆಟೋ ಚಾಲಕರು, ರೈತರು, ಯುವಕರು, ಮಹಿಳೆಯರು, ಎತ್ತು ಚಕ್ಕಡಿಗಳು ಹಾಗೂ ಟ್ರ್ಯಾಕ್ಟರ್‌ಗಳ ಮೂಲಕ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದು ಗಮನ ಸೆಳೆಯಿತು.

> "ಎಚ್.ಕೆ. ಪಾಟೀಲರು ಈ ರಾಜ್ಯದ ನೆಲ, ಜಲ, ಭಾಷೆ ಮತ್ತು ಸಮಗ್ರ ಅಭಿವೃದ್ಧಿಗಾಗಿ ನಿರಂತರವಾಗಿ ಹೋರಾಡಿದ ನಾಯಕರು. ಅವರ ಅನುಭವ ಮತ್ತು ದೂರದೃಷ್ಟಿ ಸಚಿವ ಸಂಪುಟದಲ್ಲಿ ರಾಜ್ಯಕ್ಕೆ ಅಗತ್ಯವಾಗಿದೆ. ಅವರಿಗೆ ಸಚಿವ ಸ್ಥಾನ ನೀಡುವುದು ಗದಗ ಜಿಲ್ಲೆಯ ಬೇಡಿಕೆಯಷ್ಟೇ ಅಲ್ಲ, ರಾಜ್ಯದ ಜನರ ಆಶಯವಾಗಿದೆ."
>
> **– ಸಯ್ಯದ್ ಖಾಲಿದ್ ಕೊಪ್ಪಳ,** ಕಾಂಗ್ರೆಸ್ ಯುವ ಮುಖಂಡ

ಮೆರವಣಿಗೆಯಲ್ಲಿ ಎಚ್.ಕೆ. ಪಾಟೀಲರ ರಾಜಕೀಯ ಅನುಭವ, ಆಡಳಿತಾತ್ಮಕ ಸಾಮರ್ಥ್ಯ ಹಾಗೂ ರಾಜ್ಯದ ಅಭಿವೃದ್ಧಿಗೆ ನೀಡಿರುವ ಕೊಡುಗೆಗಳನ್ನು ಬಿಂಬಿಸುವ ಬ್ಯಾನರ್‌ಗಳು ಮತ್ತು ಫಲಕಗಳು ರಾರಾಜಿಸುತ್ತಿದ್ದವು. ಬಿರು ಬಿಸಿಲಿನ ನಡುವೆಯೂ ಕಾರ್ಯಕರ್ತರು ಉತ್ಸಾಹದಿಂದ ಹೆಜ್ಜೆ ಹಾಕಿದರು. ಪ್ರತಿಭಟನಾಕಾರರಿಗಾಗಿ ಸ್ಥಳೀಯ ಮುಖಂಡರು ಮಜ್ಜಿಗೆ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಮಾಡಿದ್ದರು.

▸▸ 3ನೇ ಪುಟಕ್ಕೆ

### ಎಸ್‌ಎಸ್‌ಎಲ್‌ಸಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ, ಪ್ರೋತ್ಸಾಹಧನ ವಿತರಣೆ

# ಸಾಧಕರಿಗೆ ಸನ್ಮಾನಿಸಿ ಮಾದರಿಯಾದ ಐಎಂಎ

■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳ ಜೀವನ ರೂಪಿಸುವಲ್ಲಿ ಎಸ್‌ಎಸ್‌ಎಲ್‌ಸಿ ಹಂತ ಮಹತ್ವದ ಘಟ್ಟವಾಗಿದ್ದು, ರಾಜ್ಯಮಟ್ಟದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗದಗ ಜಿಲ್ಲೆಯ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿರುವುದು ಹೆಮ್ಮೆಯ ಸಂಗತಿ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ನಗರದ ಭಾರತೀಯ ವೈದ್ಯಕೀಯ ಸಂಘ (ಐಎಂಎ), ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಐಎಂಎ ಶತಮಾನೋತ್ಸವ ಸಂಭ್ರಮದ ಅಂಗವಾಗಿ ಆಯೋಜಿಸಿದ್ದ 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪ್ರತಿಭಾವಂತ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಗದಗದ ಐಎಂಎ ಸಂಸ್ಥೆಗೆ ಶತಮಾನಕ್ಕೂ ಮೀರಿದ ಇತಿಹಾಸವಿದ್ದು, ಸಮಾಜಕ್ಕೆ ಮರಳಿ ಏನನ್ನಾದರೂ ನೀಡಬೇಕು ಎಂಬ ಧ್ಯೇಯದೊಂದಿಗೆ ವೈದ್ಯರು ಶಿಕ್ಷಣ, ಆರೋಗ್ಯ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ನಿರಂತರ ಸೇವೆ ಸಲ್ಲಿಸುತ್ತಿರುವುದು ಶ್ಲಾಘನೀಯ ಎಂದು ಹೇಳಿದರು.




ಸಾಧಕ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಹಾಗೂ ಸನ್ಮಾನ ನೀಡುವ ಮೂಲಕ ಅವರಲ್ಲಿ ಆತ್ಮವಿಶ್ವಾಸ ತುಂಬುವ ಕಾರ್ಯವನ್ನು ಐಎಂಎ ಮಾಡುತ್ತಿದೆ. ವಿದ್ಯಾರ್ಥಿಗಳು ತಮ್ಮ ಸಾಧನೆಯ ಹಾದಿಯನ್ನು ಮುಂದುವರಿಸಿಕೊಂಡು ಯಶಸ್ಸಿನ ಶಿಖರ ತಲುಪಬೇಕು ಎಂದು ಕರೆ ನೀಡಿದರು.

> "ಸಮಾಜಕ್ಕೆ ಕೊಡುಗೆ ನೀಡುವುದರಲ್ಲಿ ಸಿಗುವ ಆತ್ಮತೃಪ್ತಿ ಅತ್ಯಂತ ದೊಡ್ಡದು. ಐಎಂಎ ವೈದ್ಯರು ಶಿಕ್ಷಣ, ಆರೋಗ್ಯ ಮತ್ತು ಸಮಾಜಮುಖಿ ಕಾರ್ಯಗಳ ಮೂಲಕ ಮಾದರಿಯಾಗಿದ್ದಾರೆ."
>
> **– ಸಿ.ಎನ್. ಶ್ರೀಧರ್,** ಜಿಲ್ಲಾಧಿಕಾರಿ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಹಂಗಾಮಿ ಕುಲಪತಿ ಹಾಗೂ ಕುಲಸಚಿವ ಪ್ರೊ. ಡಾ. ಸುರೇಶ ನಾಡಗೌಡರ ಮಾತನಾಡಿ, ಅಂಕಗಳ ಜೊತೆಗೆ ಉತ್ತಮ ನಡತೆ, ಕೃತಜ್ಞತೆ ಮತ್ತು ಸಂವಹನ ಕೌಶಲ್ಯವೂ ವಿದ್ಯಾರ್ಥಿಗಳ ಯಶಸ್ಸಿಗೆ ಅಗತ್ಯವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಜಿಲ್ಲೆ ಹಾಗೂ ತಾಲೂಕು ಮಟ್ಟದಲ್ಲಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

### ಕೊಲ್ಲಾರೆಮ್ಮ ದೇವಿಯ ಸನ್ನಿಧಿಯಲ್ಲಿ ರೈತರ ಸಾಮೂಹಿಕ ಪ್ರಾರ್ಥನೆ

# ಸಮೃದ್ಧ ಮಳೆ-ಬೆಳೆಗಾಗಿ ವಿಶೇಷ ಪೂಜೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೃದ್ಧ ಮಳೆ ಮತ್ತು ಉತ್ತಮ ಬೆಳೆಗಾಗಿ ಲಕ್ಷ್ಮೇಶ್ವರದ ರೈತ ಸಮುದಾಯ ಮಂಗಳವಾರ ಮಂಜಲಾಪುರದ ಕೊಲ್ಲಾರೆಮ್ಮ ದೇವಿಗೆ ಸಾಂಪ್ರದಾಯಿಕವಾಗಿ ವಿಶೇಷ ಪೂಜೆ ಸಲ್ಲಿಸಿ ವರುಣ ದೇವನ ಕೃಪೆ ಕೋರಿತು.

ಪಟ್ಟಣದ ಸೊಪ್ಪಿನಕೇರಿ ಓಣಿಯ ರೈತರು ಜಂತ್ಲಿ ಬಸವೇಶ್ವರ ದೇವಸ್ಥಾನದಿಂದ ಭಜನೆ ಹಾಡುತ್ತಾ ಕೊಲ್ಲಾರೆಮ್ಮ ದೇವಿಯ ಸನ್ನಿಧಿಗೆ ತೆರಳಿ ಪೂಜಾ ವಿಧಿವಿಧಾನಗಳನ್ನು ನೆರವೇರಿಸಿದರು. ದೇವಿಯ ಪ್ರಾಂಗಣದ ಮುಂಭಾಗದಲ್ಲಿ ಹೊಂಡ ನಿರ್ಮಿಸಿ ಅದರಲ್ಲಿ ನೀರು ತುಂಬಿಸಿ, ವರುಣ ದೇವರ ಮೂರ್ತಿಯನ್ನು ಪ್ರತಿಷ್ಠಾಪಿಸಿ ವಿಶೇಷ ಪೂಜೆ ಸಲ್ಲಿಸಿದರು. ಜೊತೆಗೆ ಅಶ್ವತ್ಥ ಕಟ್ಟೆಗೂ ಪೂಜೆ ನೆರವೇರಿಸಲಾಯಿತು.



ಮಳೆ ಸಮೃದ್ಧಿಯಾಗಿ ಸುರಿದು ಕೃಷಿ ಚಟುವಟಿಕೆಗಳು ಯಶಸ್ವಿಯಾಗಲಿ ಹಾಗೂ ರೈತರ ಬದುಕು ಹಸನಾಗಲಿ ಎಂಬ ಆಶಯದೊಂದಿಗೆ ರೈತರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.

> "ಹಿರಿಯರ ಕಾಲದಿಂದಲೂ ಮಳೆಗಾಗಿ ಕೊಲ್ಲಾರೆಮ್ಮ ದೇವಿಗೆ ವಿಶೇಷ ಪೂಜೆ ಸಲ್ಲಿಸುವ ಸಂಪ್ರದಾಯ ನಡೆದುಕೊಂಡು ಬಂದಿದೆ. ದೇವಿಯ ವಾಣಿಯ ಮೇಲೆ ರೈತ ಸಮುದಾಯಕ್ಕೆ ಅಪಾರ ನಂಬಿಕೆ ಇದೆ."
>
> **– ಭರಮಪ್ಪ ಗುಡಗೇರಿ ಹಾಗೂ ನೀಲಪ್ಪ ಕನವಳ್ಳಿ**

ಈ ಸಂದರ್ಭದಲ್ಲಿ ಪೂಜಾರಿಯ ಮೂಲಕ ದೇವಿಯ ವಾಣಿ ತಿಳಿಸಲಾಯಿತು. ಸಂಪ್ರದಾಯದಂತೆ ದೇವಿಯ ವಾಣಿಯ ಬಳಿಕ ಮೂರು ದಿನಗಳೊಳಗೆ ಮಳೆಯಾಗುವ ನಂಬಿಕೆ ರೈತ ಸಮುದಾಯದಲ್ಲಿದೆ.

ಹಿರಿಯರ ಕಾಲದಿಂದಲೂ ಮಳೆಗಾಗಿ ಕೊಲ್ಲಾರೆಮ್ಮ ದೇವಿಗೆ ವಿಶೇಷ ಪೂಜೆ ಸಲ್ಲಿಸುವ ಸಂಪ್ರದಾಯ ನಡೆದುಬಂದಿದ್ದು, ಐದು ಮಂಗಳವಾರಗಳ ವ್ರತಾಚರಣೆಯನ್ನೂ ರೈತರು ಪಾಲಿಸಿಕೊಂಡು ಬರುತ್ತಿದ್ದಾರೆ. ದೇವಿಯ ವಾಣಿಯಂತೆ ಮಳೆಯಾದ ಬಳಿಕ ರೈತರು ಒಟ್ಟಾಗಿ ಸೇರಿ ಗೋದಿ ಹುಗ್ಗಿ, ಜೋಳದ ಕಿಚಡಿ ಹಾಗೂ ಅನ್ನಪ್ರಸಾದ ಸಿದ್ಧಪಡಿಸಿ ಸಂಭ್ರಮದಿಂದ ಪೂಜೆ ನೆರವೇರಿಸುತ್ತಾರೆ.

▸▸ 3ನೇ ಪುಟಕ್ಕೆ

### ಎಸ್‌ಡಿಪಿಐ ಜಿಲ್ಲಾ ಪ್ರತಿನಿಧಿ ಸಭೆಯಲ್ಲಿ ಸಾಮಾಜಿಕ ನ್ಯಾಯ, ಮತದಾರರ ಹಕ್ಕುಗಳ ರಕ್ಷಣೆಗೆ ಅಪ್ಸರ್ ಕೊಡ್ಲಿಪೇಟೆ ಕರೆ

# ಪ್ರಜಾಪ್ರಭುತ್ವ ರಕ್ಷಣೆಗೆ ಜನಜಾಗೃತಿ ಅಗತ್ಯ




■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಜಾಪ್ರಭುತ್ವದ ರಕ್ಷಣೆ ಕೇವಲ ರಾಜಕೀಯ ಪಕ್ಷಗಳ ಹೊಣೆಗಾರಿಕೆಯಲ್ಲ. ಸಮಾಜದ ಪ್ರತಿಯೊಬ್ಬ ಜಾಗೃತ ನಾಗರಿಕನ ಜವಾಬ್ದಾರಿಯೂ ಆಗಿದೆ ಎಂದು ಎಸ್‌ಡಿಪಿಐ ಕರ್ನಾಟಕ ರಾಜ್ಯ ಪ್ರಧಾನ ಕಾರ್ಯದರ್ಶಿ ಅಪ್ಸರ್ ಕೊಡ್ಲಿಪೇಟೆ ಹೇಳಿದರು.

ನಗರದ ಎಸ್‌ಡಿಪಿಐ ಜಿಲ್ಲಾ ಕಚೇರಿಯಲ್ಲಿ ಜಿಲ್ಲಾಧ್ಯಕ್ಷ ಬಿಲಾಲ್ ಗೋಕಾವಿ ಅಧ್ಯಕ್ಷತೆಯಲ್ಲಿ ನಡೆದ ಪಕ್ಷದ ಮಧ್ಯಂತರ ಪ್ರತಿನಿಧಿ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

> "ಪ್ರಜಾಪ್ರಭುತ್ವವನ್ನು ಬಲಪಡಿಸುವ ಶಕ್ತಿ ಮತದಾರರಲ್ಲಿದೆ. ಜನರ ಹಕ್ಕುಗಳ ರಕ್ಷಣೆಗಾಗಿ ಜಾಗೃತಿ ಮತ್ತು ಸಂಘಟಿತ ಹೋರಾಟಗಳು ಇಂದಿನ ಅಗತ್ಯವಾಗಿದೆ."
>
> **– ಅಪ್ಸರ್ ಕೊಡ್ಲಿಪೇಟೆ,** ರಾಜ್ಯ ಪ್ರಧಾನ ಕಾರ್ಯದರ್ಶಿ, ಎಸ್‌ಡಿಪಿಐ

ದೇಶ ಹಾಗೂ ರಾಜ್ಯದ ರಾಜಕೀಯ ಬೆಳವಣಿಗೆಗಳನ್ನು ಉಲ್ಲೇಖಿಸಿದ ಅವರು, ಸಂವಿಧಾನಾತ್ಮಕ ಸಂಸ್ಥೆಗಳ ಮೇಲೆ ಒತ್ತಡ, ಅಲ್ಪಸಂಖ್ಯಾತರು ಮತ್ತು ಹಿಂದುಳಿದ ವರ್ಗಗಳ ಮೇಲಿನ ಅನ್ಯಾಯ ಹಾಗೂ ಅಧಿಕಾರ ದುರುಪಯೋಗದ ವಿರುದ್ಧ ಜನರಲ್ಲಿ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಹೇಳಿದರು.

ಸಾಮಾಜಿಕ ನ್ಯಾಯ, ಸಮಾನತೆ ಹಾಗೂ ಹಕ್ಕುಗಳ ಸಂರಕ್ಷಣೆಗಾಗಿ ಸಂಘಟಿತ ಹೋರಾಟಗಳು ಅನಿವಾರ್ಯವಾಗಿದ್ದು, ಪಕ್ಷದ ಕಾರ್ಯಕರ್ತರು ಜನರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಪ್ರಜಾಪ್ರಭುತ್ವ ಬಲಪಡಿಸಬೇಕು ಎಂದು ಕರೆ ನೀಡಿದರು.

▸▸ 4ನೇ ಪುಟಕ್ಕೆ

# ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2026–27ನೇ ಸಾಲಿಗೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಂದ ವಿವಿಧ ವಿದ್ಯಾರ್ಥಿ ಕಲ್ಯಾಣ ಯೋಜನೆಗಳ ಸೌಲಭ್ಯ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿವೇತನ, ಶುಲ್ಕ ವಿನಾಯಿತಿ ಹಾಗೂ ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆಗಳ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಹ ವಿದ್ಯಾರ್ಥಿಗಳು ಎಸ್‌ಎಸ್‌ಪಿ (ಸ್ಟೇಟ್ ಸ್ಕಾಲರ್‌ಶಿಪ್ ಪೋರ್ಟಲ್) ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಆಗಸ್ಟ್ 31 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಮಹೆಬೂಬ ತುಂಬರಮಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮೃದ್ಧ ಮಳೆ–ಬೆಳೆಗಾಗಿ ವಿಶೇಷ ಪೂಜೆ

▸▸ ಮೊದಲನೇ ಪುಟದಿಂದ

ದೇವಿಯ ವಾಣಿ ಎಂದಿಗೂ ಸುಳ್ಳಾಗಿಲ್ಲ ಎಂಬ ನಂಬಿಕೆಯಿಂದ ರೈತರು ಈ ಸಂಪ್ರದಾಯವನ್ನು ಶ್ರದ್ಧಾಭಕ್ತಿಯಿಂದ ಮುಂದುವರಿಸಿಕೊಂಡು ಬರುತ್ತಿದ್ದಾರೆ ಎಂದು ಹಿರಿಯರಾದ ಭರಮಪ್ಪ ಗುಡಗೇರಿ ಹಾಗೂ ನೀಲಪ್ಪ ಕನವಳ್ಳಿ ತಿಳಿಸಿದರು. ಕಾರ್ಯಕ್ರಮದಲ್ಲಿ ನೀಲಪ್ಪ ಕನವಳ್ಳಿ, ಭರಮಪ್ಪ ಕೊಡ್ಲಿ, ಚನ್ನಪ್ಪ ಆದಿ, ಭರಮಣ್ಣ ಗುಡಗೇರಿ, ಮುದಕನಗೌಡ ಪಾಟೀಲ, ಈರಣ್ಣ ಮುಳಗುಂದ, ಸೋಮಣ್ಣ ಚಿಂಚಲಿ, ವಿರೂಪಾಕ್ಷ ಆದಿ, ಮಯೂರಗೌಡ ಪಾಟೀಲ, ಮಂಜಪ್ಪ ಮುಳಗುಂದ, ಈರಪ್ಪ ಗುಡಗೇರಿ, ರಮೇಶ್ ಹೆಬ್ಬಾಳ, ಬಸವರಾಜ ಆದಿ, ಸಿದ್ದು ರಾಚನಾಯ್ಕರ, ಶೇಖಪ್ಪ ಪುಟಾಣಿ, ಈರಣ್ಣ ಹುಳಕನವರ, ಶಂಭು ತಂಡಿಗೇರ, ಪರಶುರಾಮ ಶಿರಹಟ್ಟಿ ಸೇರಿದಂತೆ ರೈತರು ಹಾಗೂ ಮಹಿಳೆಯರು ಭಾಗವಹಿಸಿದ್ದರು.

**ಟಾಟಾ ಪವರ್‌ಗೆ ವಿತರಣಾ ಪರವಾನಗಿ ನೀಡದಂತೆ ಆಕ್ಷೇಪಣಾ ಅಭಿಯಾನಕ್ಕೆ ರಾಜೇಶ ಕಲ್ಯಾಣಶೆಟ್ಟಿ ಕರೆ**

# ವಿದ್ಯುತ್ ಖಾಸಗೀಕರಣ ರೈತರಿಗೆ ಮಾರಕ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯದಲ್ಲಿ ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸುವ ಯಾವುದೇ ಕ್ರಮವೂ ರೈತರು, ವಿದ್ಯುತ್ ಬಳಕೆದಾರರು ಹಾಗೂ ವಿದ್ಯುತ್ ವಲಯದ ನೌಕರರ ಹಿತಾಸಕ್ತಿಗೆ ವಿರುದ್ಧವಾಗಿದ್ದು, ಸಾರ್ವಜನಿಕ ಆಸ್ತಿಯನ್ನು ಖಾಸಗಿ ಸಂಸ್ಥೆಗಳಿಗೆ ಒಪ್ಪಿಸುವಂತಾಗಿದೆ ಎಂದು ಗದಗ ಪಾಲನಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ರಾಜೇಶ ಕಲ್ಯಾಣಶೆಟ್ಟಿ ಹೇಳಿದರು.

ಪಟ್ಟಣದ ಹೆಸ್ಕಾಂ ಉಪವಿಭಾಗ ಕಚೇರಿ ಆವರಣದಲ್ಲಿ ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ (ಕೆಇಆರ್‌ಸಿ) ಟಾಟಾ ಪವರ್ ಕಂಪನಿಗೆ ವಿದ್ಯುತ್ ವಿತರಣಾ ಪರವಾನಗಿ ನೀಡದಂತೆ ಹಾಗೂ ವಿದ್ಯುತ್ ಕ್ಷೇತ್ರ ಖಾಸಗೀಕರಣವನ್ನು ವಿರೋಧಿಸಿ ರೈತರು, ಬಳಕೆದಾರರು ಮತ್ತು ಹೆಸ್ಕಾಂ ನೌಕರರಿಗಾಗಿ ಆಯೋಜಿಸಿದ್ದ ಆಕ್ಷೇಪಣಾ ಅರ್ಜಿ ಸಲ್ಲಿಕೆ ಹಾಗೂ ಜನಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹೆಸ್ಕಾಂ ಸಂಸ್ಥೆಯು ಕೋಟ್ಯಂತರ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿರುವ ವಿದ್ಯುತ್ ಕಂಬಗಳು, ಉಪಕೇಂದ್ರಗಳು ಹಾಗೂ ಇತರೆ ಮೂಲಸೌಕರ್ಯಗಳನ್ನು ಖಾಸಗಿ ಕಂಪನಿಗಳ ಬಳಕೆಗೆ ನೀಡುವುದು ಸರಿಯಲ್ಲ. ಖಾಸಗೀಕರಣ ಜಾರಿಯಾದರೆ ರೈತರಿಗೆ ದೊರೆಯುತ್ತಿರುವ ಉಚಿತ ವಿದ್ಯುತ್ ಸೌಲಭ್ಯ ಸ್ಥಗಿತಗೊಳ್ಳುವ ಸಾಧ್ಯತೆ ಇದ್ದು, ಪಂಪ್‌ಸೆಟ್‌ಗಳಿಗೆ ಮೀಟರ್ ಅಳವಡಿಕೆ ಕಡ್ಡಾಯವಾಗಬಹುದು ಎಂದು ಅವರು ಆತಂಕ ವ್ಯಕ್ತಪಡಿಸಿದರು.



ಸರ್ಕಾರದ ಗೃಹಜ್ಯೋತಿ, ಭಾಗ್ಯಜ್ಯೋತಿ, ಕುಟೀರ ಜ್ಯೋತಿ ಹಾಗೂ ಗಂಗಾ ಕಲ್ಯಾಣ ಸೇರಿದಂತೆ ಹಲವು ಜನಪರ ಯೋಜನೆಗಳು ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆ ಇದೆ. ಜೊತೆಗೆ ಕೈಮಗ್ಗ ನೇಕಾರರು ಹಾಗೂ ಕಾಫಿ ಬೆಳೆಗಾರರಿಗೆ ನೀಡಲಾಗುತ್ತಿರುವ ಸಬ್ಸಿಡಿ ಸೌಲಭ್ಯಗಳ ಮೇಲೂ ಪರಿಣಾಮ ಬೀರುವ ಸಾಧ್ಯತೆಯಿದೆ ಎಂದು ಹೇಳಿದರು.

ಅಖಿಲ ಕರ್ನಾಟಕ ರಾಜ್ಯ ಕಿಸಾನ್ ಜಾಗೃತಿ ಸಂಘದ ಜಿಲ್ಲಾ ಗೌರವಾಧ್ಯಕ್ಷ ಟಾಕಪ್ಪ ಸಾತಪುತೆ ಮಾತನಾಡಿ, ಖಾಸಗಿ ಕಂಪನಿಗಳ ಪ್ರವೇಶದಿಂದ ಕೆಲವು ರಾಜ್ಯಗಳಲ್ಲಿ ರೈತರು ಮತ್ತು ಗ್ರಾಹಕರು ಸಂಕಷ್ಟ ಅನುಭವಿಸಿರುವ ಉದಾಹರಣೆಗಳಿವೆ. ಆದ್ದರಿಂದ ಜೂನ್ 23ರೊಳಗೆ ಆಕ್ಷೇಪಣಾ ಪತ್ರ ಸಲ್ಲಿಕೆ ಅಭಿಯಾನವನ್ನು ಯಶಸ್ವಿಗೊಳಿಸಬೇಕು ಎಂದು ಕರೆ ನೀಡಿದರು.

ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಸುರೇಶ ಸ್ವಾದಿ, ಅಂಜುಮನ್–ಎ–ಇಸ್ಲಾಂ ಸಂಸ್ಥೆಯ ಅಧ್ಯಕ್ಷ ಮುಕ್ತಾರ ಅಹ್ಮದ್ ಗದಗ, ಬಾಬಣ್ಣ ಉಮಚಗಿ, ಬಸವರಾಜ ಸೂರಣಗಿ ಹಾಗೂ ಬಸವರಾಜ ಟೋಕಾಳಿ ಮಾತನಾಡಿ, ಯಾವುದೇ ಕಾರಣಕ್ಕೂ ಟಾಟಾ ಪವರ್ ಕಂಪನಿಗೆ ವಿತರಣಾ ಪರವಾನಗಿ ನೀಡಬಾರದು. ಖಾಸಗೀಕರಣದ ವಿರುದ್ಧ ಹೋರಾಟ ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

> "ವಿದ್ಯುತ್ ಕ್ಷೇತ್ರ ಖಾಸಗೀಕರಣಗೊಂಡರೆ ರೈತರಿಗೆ ನೀಡಲಾಗುತ್ತಿರುವ ಉಚಿತ ವಿದ್ಯುತ್ ಸೇರಿದಂತೆ ಹಲವು ಜನಪರ ಯೋಜನೆಗಳಿಗೆ ಧಕ್ಕೆ ಉಂಟಾಗುವ ಸಾಧ್ಯತೆ ಇದೆ. ಸಾರ್ವಜನಿಕ ಹಿತಾಸಕ್ತಿಯನ್ನು ಕಾಪಾಡಲು ಎಲ್ಲರೂ ಖಾಸಗೀಕರಣವನ್ನು ವಿರೋಧಿಸಬೇಕು."
> **– ರಾಜೇಶ ಕಲ್ಯಾಣಶೆಟ್ಟಿ,** ಕಾರ್ಯನಿರ್ವಾಹಕ ಇಂಜಿನಿಯರ್, ಗದಗ

ಕಾರ್ಯಕ್ರಮದಲ್ಲಿ ಹೆಸ್ಕಾಂ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಅಂಜನೇಪ್ಪ ಬಿ., ಶಾಖಾಧಿಕಾರಿಗಳಾದ ಕಿರಣಕುಮಾರ ಪಮ್ಮಾರ, ರಘುಪತಿ ನಾಯಕ, ಇರನಗೌಡ, ಬಸವರಾಜ, ವಿಜಯ, ಸಂತೋಷ ನಾಯಕ ಸೇರಿದಂತೆ ಅನೇಕ ರೈತರು, ಲೈನ್‌ಮನ್‌ಗಳು ಹಾಗೂ ವಿದ್ಯುತ್ ಬಳಕೆದಾರರು ಭಾಗವಹಿಸಿದ್ದರು.

**ಜನಕಲ್ಯಾಣ ಯೋಜನೆಗಳಿಂದ ಕೋಟ್ಯಂತರ ಜನರ ಬದುಕಿನಲ್ಲಿ ಬದಲಾವಣೆ: ಸದಾನಂದಗೌಡ**

# ದೇಶದ ಚಿತ್ರಣ ಬದಲಿಸಿದ ಮೋದಿ ನಾಯಕತ್ವ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಕಳೆದ 12 ವರ್ಷಗಳಲ್ಲಿ ಭಾರತವು ಕೇವಲ ತನ್ನ ಚಿತ್ರಣವನ್ನಷ್ಟೇ ಅಲ್ಲ, ತನ್ನ ಅದೃಷ್ಟವನ್ನೂ ಬದಲಿಸಿಕೊಂಡಿದೆ ಎಂದು ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದಗೌಡ ಹೇಳಿದರು.

ನಗರದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 2014ರಿಂದ ಆರಂಭವಾದ ಮೋದಿ ಸರ್ಕಾರದ ಆಡಳಿತವು ಸುಶಾಸನ, ಅಭಿವೃದ್ಧಿ ಹಾಗೂ ಜನಕಲ್ಯಾಣದ ಹೊಸ ಅಧ್ಯಾಯಕ್ಕೆ ನಾಂದಿ ಹಾಡಿದೆ. 2014, 2019 ಮತ್ತು 2024ರಲ್ಲಿ ಸತತ ಮೂರು ಬಾರಿ ಜನರು ಬಿಜೆಪಿ ನೇತೃತ್ವದ ಸರ್ಕಾರಕ್ಕೆ ಅಧಿಕಾರ ನೀಡಿರುವುದು ಪ್ರಧಾನಿ ಮೋದಿ ಅವರ ಮೇಲಿನ ಜನವಿಶ್ವಾಸಕ್ಕೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಕೇಂದ್ರ ಸರ್ಕಾರದ ವಿವಿಧ ಜನಪರ ಯೋಜನೆಗಳಿಂದ ದೇಶದ ಕೋಟ್ಯಂತರ ಜನರ ಬದುಕಿನಲ್ಲಿ ಬದಲಾವಣೆ ಕಂಡುಬಂದಿದೆ. ಜನ್‌ಧನ್ ಯೋಜನೆ, ಆಯುಷ್ಮಾನ್ ಭಾರತ, ಉಜ್ವಲ ಯೋಜನೆ, ಪಿಎಂ ಕಿಸಾನ್ ಸಮ್ಮಾನ್ ನಿಧಿ, ಪಿಎಂ ಆವಾಸ್ ಯೋಜನೆ ಸೇರಿದಂತೆ ಹಲವಾರು ಯೋಜನೆಗಳು ಬಡವರು, ರೈತರು, ಮಹಿಳೆಯರು ಹಾಗೂ ಯುವಕರ ಬದುಕಿಗೆ ಹೊಸ ಆಶಾಕಿರಣವಾಗಿವೆ ಎಂದು ತಿಳಿಸಿದರು.



> "ಮೋದಿ ಸರ್ಕಾರದ 12 ವರ್ಷಗಳು ಕೇವಲ ಆಡಳಿತದ ಅವಧಿಯಲ್ಲ; ಅದು ಬಡವರ ಬದುಕು ಬದಲಿಸಿದ, ದೇಶದ ಆತ್ಮವಿಶ್ವಾಸ ಹೆಚ್ಚಿಸಿದ ಮತ್ತು ವಿಕಸಿತ ಭಾರತದ ಅಡಿಪಾಯ ಹಾಕಿದ ಸುವರ್ಣಯುಗವಾಗಿದೆ."
> **– ಡಿ.ವಿ. ಸದಾನಂದಗೌಡ,** ಮಾಜಿ ಮುಖ್ಯಮಂತ್ರಿ

ಡಿಜಿಟಲ್ ಆಡಳಿತ ವ್ಯವಸ್ಥೆಯಿಂದ ಭ್ರಷ್ಟಾಚಾರಕ್ಕೆ ಕಡಿವಾಣ ಬಿದ್ದಿದ್ದು, ನೇರ ಹಣ ವರ್ಗಾವಣೆ ಮೂಲಕ ಲಕ್ಷಾಂತರ ಕೋಟಿ ರೂಪಾಯಿ ಸೋರಿಕೆಯನ್ನು ತಡೆಗಟ್ಟಲಾಗಿದೆ. ದೇಶದ ಗಡಿ ಭದ್ರತೆ ಬಲಗೊಂಡಿದ್ದು, ಸರ್ಜಿಕಲ್ ಸ್ಟ್ರೈಕ್ ಹಾಗೂ ಏರ್ ಸ್ಟ್ರೈಕ್ ಮೂಲಕ ಭಾರತ ತನ್ನ ಶಕ್ತಿಯನ್ನು ಜಗತ್ತಿಗೆ ತೋರಿಸಿದೆ ಎಂದು ಹೇಳಿದರು.

ಕಳೆದ 12 ವರ್ಷಗಳಲ್ಲಿ ರಾಷ್ಟ್ರೀಯ ಹೆದ್ದಾರಿಗಳು, ರೈಲ್ವೆ, ಮೆಟ್ರೋ, ವಿಮಾನ ನಿಲ್ದಾಣಗಳು ಸೇರಿದಂತೆ ಮೂಲಸೌಕರ್ಯ ಕ್ಷೇತ್ರದಲ್ಲಿ ಐತಿಹಾಸಿಕ ಬೆಳವಣಿಗೆ ಕಂಡುಬಂದಿದೆ. ಗ್ರಾಮೀಣ ರಸ್ತೆ, ನೀರಾವರಿ ಹಾಗೂ ಡಿಜಿಟಲ್ ಸಂಪರ್ಕ ವ್ಯವಸ್ಥೆಗಳ ಮೂಲಕ ಅಭಿವೃದ್ಧಿಯ ಫಲಗಳನ್ನು ಕೊನೆಯ ವ್ಯಕ್ತಿಯವರೆಗೂ ತಲುಪಿಸಲಾಗಿದೆ ಎಂದು ಹೇಳಿದರು.

ಭಾರತ ಇಂದು ಜಾಗತಿಕ ಮಟ್ಟದಲ್ಲಿ ಪ್ರಬಲ ರಾಷ್ಟ್ರವಾಗಿ ಹೊರಹೊಮ್ಮಿದ್ದು, ಜಿ–20 ಯಶಸ್ವಿ ಅಧ್ಯಕ್ಷತೆ, ಯೋಗ ದಿನಾಚರಣೆಗೆ ವಿಶ್ವದ ಬೆಂಬಲ ಹಾಗೂ ವಿದೇಶಿ ಹೂಡಿಕೆಗಳ ಹೆಚ್ಚಳ ದೇಶದ ಮೇಲಿನ ಜಾಗತಿಕ ವಿಶ್ವಾಸವನ್ನು ತೋರಿಸುತ್ತವೆ ಎಂದು ಸದಾನಂದಗೌಡ ಅಭಿಪ್ರಾಯಪಟ್ಟರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಭಾರತದ ಇತಿಹಾಸದಲ್ಲೇ ಅತ್ಯಂತ ದೀರ್ಘಾವಧಿಯ ಚುನಾಯಿತ ಪ್ರಧಾನಮಂತ್ರಿಯಾಗಿ ಹೊಸ ದಾಖಲೆ ನಿರ್ಮಿಸುತ್ತಿದ್ದು, ಅವರ ನಾಯಕತ್ವದಲ್ಲಿ ವಿಕಸಿತ ಭಾರತದ ಕನಸು ಸಾಕಾರಗೊಳ್ಳುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಸಿ.ಸಿ. ಪಾಟೀಲ, ಬಿಜೆಪಿ ಜಿಲ್ಲಾ ಅಧ್ಯಕ್ಷ ತೋಟಪ್ಪ (ರಾಜು) ಕುರುಡಗಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಸೇರಿದಂತೆ ಪಕ್ಷದ ಹಲವು ಮುಖಂಡರು ಉಪಸ್ಥಿತರಿದ್ದರು.

**ಜೂ. 21ರಂದು ಕೆ.ಎಚ್. ಪಾಟೀಲ ಕ್ರೀಡಾಂಗಣದಲ್ಲಿ ಜಿಲ್ಲಾ ಮಟ್ಟದ ಯೋಗ ದಿನಾಚರಣೆ; ಪೂರ್ವಭಾವಿ ಸಭೆಯಲ್ಲಿ ಸಿದ್ಧತೆಗಳ ಪರಿಶೀಲನೆ**

# ಯೋಗ ದಿನಾಚರಣೆ ಅರ್ಥಪೂರ್ಣವಾಗಿರಲಿ

■ವಿಜಯಸಾಕ್ಷಿ ಸುದ್ದಿ, ಗದಗ

12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಜೂನ್ 21ರಂದು ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಅರ್ಥಪೂರ್ಣ ಹಾಗೂ ಅಚ್ಚುಕಟ್ಟಾಗಿ ಆಚರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಆಯುಷ್ ಇಲಾಖೆಯ ವತಿಯಿಂದ ನಡೆದ ಯೋಗ ದಿನಾಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಯೋಗವು ದೈಹಿಕ ಹಾಗೂ ಮಾನಸಿಕ ಆರೋಗ್ಯ ಕಾಪಾಡುವ ಅತ್ಯುತ್ತಮ ಸಾಧನವಾಗಿದ್ದು, ಪ್ರತಿಯೊಬ್ಬರೂ ತಮ್ಮ ದೈನಂದಿನ ಜೀವನದಲ್ಲಿ ಯೋಗವನ್ನು ಅಳವಡಿಸಿಕೊಳ್ಳಬೇಕು. ಇಂದಿನ ಒತ್ತಡದ ಬದುಕಿನಲ್ಲಿ ಮಾನಸಿಕ ಹಾಗೂ ದೈಹಿಕ ಸಮಸ್ಯೆಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಯೋಗಾಭ್ಯಾಸ ಅತ್ಯಗತ್ಯವಾಗಿದೆ ಎಂದು ಹೇಳಿದರು.



ಜಿಲ್ಲೆಯ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಶಾಲೆ–ಕಾಲೇಜುಗಳಲ್ಲಿ ಯೋಗ ದಿನಾಚರಣೆಯನ್ನು ಕಡ್ಡಾಯವಾಗಿ ಆಯೋಜಿಸಬೇಕು. ಯೋಗ ಕೇವಲ ಒಂದು ದಿನದ ಆಚರಣೆಗೆ ಸೀಮಿತವಾಗದೆ, ವಿದ್ಯಾರ್ಥಿಗಳಲ್ಲಿ ಏಕಾಗ್ರತೆ, ನೆನಪಿನ ಶಕ್ತಿ ಹಾಗೂ ಆರೋಗ್ಯ ವೃದ್ಧಿಗೆ ನಿರಂತರ ಅಭ್ಯಾಸವಾಗಬೇಕು ಎಂದು ಜಿಲ್ಲಾಧಿಕಾರಿ ಸಲಹೆ ನೀಡಿದರು.

ಸಾರ್ವಜನಿಕರಲ್ಲಿ ಆರೋಗ್ಯ ಜಾಗೃತಿ ಮೂಡಿಸುವಲ್ಲಿ ಯೋಗ ಸಂಸ್ಥೆಗಳು ಪ್ರಮುಖ ಪಾತ್ರವಹಿಸಬೇಕು. ಯೋಗ ದಿನಾಚರಣೆಯಲ್ಲಿ ಸಾರ್ವಜನಿಕರು, ಹಿರಿಯ ನಾಗರಿಕರು ಹಾಗೂ ಯೋಗಾಸಕ್ತರು ಯಾವುದೇ ವಯೋಮಿತಿ ಇಲ್ಲದೆ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ. ಕಾರ್ಯಕ್ರಮ ಸ್ಥಳದಲ್ಲಿ ಶುದ್ಧ ಕುಡಿಯುವ ನೀರು, ಶೌಚಾಲಯ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸುವಂತೆ ಸಂಬಂಧಿತ ಅಧಿಕಾರಿಗಳಿಗೆ ಸೂಚಿಸಿದರು.

> "ಯೋಗವು ಆರೋಗ್ಯಕರ ಜೀವನದ ಮೂಲಮಂತ್ರ. ಪ್ರತಿಯೊಬ್ಬರೂ ದೈನಂದಿನ ಜೀವನದಲ್ಲಿ ಯೋಗ ಅಳವಡಿಸಿಕೊಂಡರೆ ದೈಹಿಕ ಮತ್ತು ಮಾನಸಿಕ ಸದೃಢತೆ ಸಾಧ್ಯ."
> **– ಸಿ.ಎನ್. ಶ್ರೀಧರ್,** ಜಿಲ್ಲಾಧಿಕಾರಿ, ಗದಗ

ಜಿಲ್ಲಾ ಆಯುಷ್ ಅಧಿಕಾರಿ ಡಾ. ಜುಬೇದ ಬೇಗಂ ಮಾತನಾಡಿ, ಜೂನ್ 21ರಂದು ಬೆಳಿಗ್ಗೆ 6.15ಕ್ಕೆ ಉದ್ಘಾಟನಾ ಸಮಾರಂಭ ನಡೆಯಲಿದ್ದು, ಬೆಳಿಗ್ಗೆ 7 ಗಂಟೆಯಿಂದ ಸಾಮೂಹಿಕ ಯೋಗಾಭ್ಯಾಸ ಕಾರ್ಯಕ್ರಮ ಜರುಗಲಿದೆ ಎಂದು ತಿಳಿಸಿದರು.

ಯೋಗ ದಿನಾಚರಣೆ ಅಂಗವಾಗಿ ಜೂನ್ 20ರಂದು ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿದ್ದು, ಬೆಳಿಗ್ಗೆ 9.30ಕ್ಕೆ ಗದಗ–ಬೆಟಗೇರಿ ನಗರ ಆವರಣದಿಂದ ಹೊರಟು ಟಾಂಗಾ ಕೂಟ, ರೋಟರಿ ಸರ್ಕಲ್, ಗಾಂಧಿ ಸರ್ಕಲ್ ಮಾರ್ಗವಾಗಿ ನಗರಸಭೆ ಆವರಣ ತಲುಪಲಿದೆ ಎಂದು ಮಾಹಿತಿ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ., ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ರಾಧಾ ಮಣ್ಣೂರ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ. ಮಸನಾಯಕ, ಆಯುಷ್ ವೈದ್ಯಾಧಿಕಾರಿಗಳ ಸಂಘದ ಅಧ್ಯಕ್ಷ ಡಾ. ಸಂಜೀವ ನಾರಪ್ಪನವರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಯೋಗ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

**ಪ್ರೊ. ಕೃಷ್ಣಪ್ಪರ ಆದರ್ಶಗಳೊಂದಿಗೆ ಶೈಕ್ಷಣಿಕ ಸಾಮಗ್ರಿ ವಿತರಿಸಿದ ದಲಿತ ಸಂಘರ್ಷ ಸಮಿತಿ**

# ಮಕ್ಕಳ ಕನಸುಗಳಿಗೆ ಜ್ಞಾನದ ರೆಕ್ಕೆ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಶಿಕ್ಷಣವೇ ಸಮಾಜ ಪರಿವರ್ತನೆಯ ಪ್ರಮುಖ ಅಸ್ತ್ರ ಎಂಬ ಸಂದೇಶದೊಂದಿಗೆ ಕರ್ನಾಟಕ ದಲಿತ ಸಂಘರ್ಷ ಸಮಿತಿ (ರಿ) ವತಿಯಿಂದ ತಾಲೂಕಿನ ಚಿಂತರಪಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಒಂದರಿಂದ ಏಳನೇ ತರಗತಿಯ ವಿದ್ಯಾರ್ಥಿಗಳಿಗೆ ಉಚಿತ ನೋಟ್ ಪುಸ್ತಕ ಹಾಗೂ ಪೆನ್ನುಗಳನ್ನು ವಿತರಿಸಲಾಯಿತು.

ಪ್ರೊ. ಬಿ. ಕೃಷ್ಣಪ್ಪ ಅವರ ಜನ್ಮದಿನದ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಸಾಮಗ್ರಿಗಳನ್ನು ವಿತರಿಸಿ, ಶಿಕ್ಷಣದ ಮಹತ್ವದ ಕುರಿತು ಜಾಗೃತಿ ಮೂಡಿಸಲಾಯಿತು.

ಕಾ೦ಬ್ರ್ಕ್ರ್ವ್ಂದ್ ಪ್ರಾಸ್ತಾವಿಕವಾಗಿ ಮಾತನಾಡಿದ ಕರ್ನಾಟಕ ದಲಿತ ಸಂಘರ್ಷ ಸಮಿತಿ ತಾಲೂಕು ಅಧ್ಯಕ್ಷ ಹೆಗ್ಡಾಳ್ ಪರಶುರಾಮ್, ದಲಿತ ಸಂಘರ್ಷ ಸಮಿತಿಯ ಸಂಸ್ಥಾಪಕ ಪ್ರೊ. ಬಿ. ಕೃಷ್ಣಪ್ಪ ಅವರ ಜೀವನ ಸಾಧನೆ ಹಾಗೂ ಸಾಮಾಜಿಕ ಹೋರಾಟಗಳನ್ನು ಸ್ಮರಿಸಿದರು. ವರ್ಣಭೇದ, ಜಾತಿ ವ್ಯವಸ್ಥೆ ಹಾಗೂ ಮೂಢನಂಬಿಕೆಗಳ ವಿರುದ್ಧ ಅವರು ನಡೆಸಿದ ಹೋರಾಟಗಳು ಸಮಾಜಕ್ಕೆ ದಿಕ್ಕು ತೋರಿವೆ ಎಂದು ಹೇಳಿದರು.




ತಾಲೂಕು ಸಂಘಟನಾ ಸಂಚಾಲಕ ದಶಮಾಪುರ ಮರಿಯಪ್ಪ ಮಾತನಾಡಿ, ಶಿಕ್ಷಣದಿಂದ ಮಾತ್ರ ಸಮಾಜದಲ್ಲಿ ಬದಲಾವಣೆ ಮತ್ತು ಅಭಿವೃದ್ಧಿ ಸಾಧ್ಯ. ಸರ್ಕಾರ ಹಾಗೂ ವಿವಿಧ ಸಂಘ–ಸಂಸ್ಥೆಗಳು ವಿದ್ಯಾರ್ಥಿಗಳಿಗಾಗಿ ಒದಗಿಸುತ್ತಿರುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

> "ಶಿಕ್ಷಣವೇ ಸಮಾಜದ ಏಳಿಗೆಗೆ ಮೂಲಭೂತ ಅಸ್ತ್ರ. ವಿದ್ಯಾರ್ಥಿಗಳು ದೊರೆಯುತ್ತಿರುವ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು."
> **– ದಶಮಾಪುರ ಮರಿಯಪ್ಪ,** ತಾಲೂಕು ಸಂಘಟನಾ ಸಂಚಾಲಕ, ದಲಿತ ಸಂಘರ್ಷ ಸಮಿತಿ

ತಾಲೂಕು ಪಂಚಾಯಿತಿ ಮಾಜಿ ಸದಸ್ಯ ಚಿಂತರಪಳ್ಳಿ ದೇವೇಂದ್ರಪ್ಪ ಮಾತನಾಡಿ, ಶಿಕ್ಷಣಕ್ಕೆ ಆದ್ಯತೆ ನೀಡುವ ಉದ್ದೇಶದಿಂದ ಮಕ್ಕಳಿಗೆ ಪುಸ್ತಕ–ಪೆನ್ನು ವಿತರಿಸುತ್ತಿರುವ ದಲಿತ ಸಂಘರ್ಷ ಸಮಿತಿಯ ಕಾರ್ಯ ಶ್ಲಾಘನೀಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಗ್ಯಾರಂಟಿ ಅಧ್ಯಕ್ಷ ಸೊನ್ನದ ಗುರುಬಸವರಾಜ್ ಮಾತನಾಡಿ, ಮಕ್ಕಳ ಮನಸ್ಸು ಖಾಲಿ ಪುಸ್ತಕದಂತೆ ಇರುತ್ತದೆ. ಉತ್ತಮ ಶಿಕ್ಷಣ ಮತ್ತು ಸಂಸ್ಕಾರಗಳಿಂದ ತಮ್ಮ ಜೀವನವನ್ನು ಯಶಸ್ವಿಯಾಗಿ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಸಂಘಟನಾ ಸಂಚಾಲಕ ಪ್ರಭಾಕರ ಆನಂದಳ್ಳಿ ಮಾತನಾಡಿ, "ಶಿಕ್ಷಣ ಎನ್ನುವುದು ಹುಲಿಯ ಹಾಲಿದ್ದಂತೆ, ಅದನ್ನು ಕುಡಿದವರು ಘರ್ಜಿಸಲೇಬೇಕು" ಎಂಬ ಡಾ. ಬಿ.ಆರ್. ಅಂಬೇಡ್ಕರ್ ಅವರ ವಿಚಾರವನ್ನು ಉಲ್ಲೇಖಿಸಿ, ವಿದ್ಯಾರ್ಥಿಗಳು ಪ್ರಶ್ನಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಶ್ರೀನಿವಾಸ್, ಮುಖ್ಯಗುರು ಬಸವರಾಜ್, ಗ್ರಾಮಸ್ಥರಾದ ಹುಲುಗಪ್ಪ, ಸುರೇಶ ಬಣಕಾರ, ಅಂಜಿನಪ್ಪ, ಪ್ರಕಾಶ, ಮಂಜು, ಕೊಟ್ರೇಶ ತಳವಾರ, ಶಿಕ್ಷಕರಾದ ವಾಮದೇವಪ್ಪ, ಭಾರತಿ, ವಿರುಪಾಕ್ಷಿ, ರಾಘವೇಂದ್ರ ಹಾಗೂ ದಲಿತ ಸಂಘರ್ಷ ಸಮಿತಿಯ ಜಿಲ್ಲಾ ಮತ್ತು ತಾಲೂಕು ಪದಾಧಿಕಾರಿಗಳು ಉಪಸ್ಥಿತರಿದ್ದರು.

**ಅಧಿಕ ಮಾಸದ ಅಂಗವಾಗಿ ವಿಪ್ರ ಮಹಿಳೆಯರಿಂದ ವಿಶೇಷ ಧಾರ್ಮಿಕ ಕಾರ್ಯಕ್ರಮ**

# ಶಂಕರ ಭಾರತಿ ಮಠದಲ್ಲಿ ಭಕ್ತಿ ಸಾಗರ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಅಧಿಕ ಮಾಸದ ಅಂಗವಾಗಿ ಪಟ್ಟಣದ ಶಂಕರ ಭಾರತಿ ಮಠದಲ್ಲಿ ವಿಪ್ರ ಮಹಿಳಾ ಸಮಾಜದ ವತಿಯಿಂದ ಆಯೋಜಿಸಲಾದ ವಿಶೇಷ ಧಾರ್ಮಿಕ ಹಾಗೂ ಭಜನಾ ಕಾರ್ಯಕ್ರಮಗಳು ಭಕ್ತಿಭಾವದಿಂದ ನೆರವೇರಿದವು.

ಅಧಿಕ ಮಾಸದ ಅವಧಿಯಲ್ಲಿ ವಿಷ್ಣು ಸಹಸ್ರನಾಮ ಪಠಣ, ಗೌರಿ ಪೂಜೆ, ಶಾರದಾ ಭಜನಾ ಮಂಡಳಿಯಿಂದ ನಿತ್ಯ ವಿಶೇಷ ಭಜನೆ ಹಾಗೂ ಕೋಲಾಟ ಕಾರ್ಯಕ್ರಮಗಳು ನಡೆದವು. ಮಾಸದ ಕೊನೆಯ ದಿನವಾದ ಭಾನುವಾರ ನಡೆದ ಮಂಗಲೋತ್ಸವದಲ್ಲಿ ವಿಪ್ರ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಭಕ್ತಿಗೀತೆಗಳು, ದಾಸರ ಪದಗಳು ಹಾಗೂ ದೇವರ ನಾಮಸ್ಮರಣೆಯ ಮೂಲಕ ಭಜನೆ ನಡೆಸಿದರು.

ಈ ವೇಳೆ ಉಡಿ ತುಂಬುವ ಕಾರ್ಯಕ್ರಮ ನೆರವೇರಿಸಿ, ಲೋಕಕಲ್ಯಾಣ ಹಾಗೂ ಸಮಸ್ತ ಜನರ ಸುಖ–ಶಾಂತಿಗಾಗಿ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು. ಬಳಿಕ ಭಕ್ತರಿಗೆ ಮಹಾಪ್ರಸಾದ ವಿತರಿಸಲಾಯಿತು.



> "ಅಧಿಕ ಮಾಸವು ಆತ್ಮಶುದ್ಧಿ, ಭಕ್ತಿ ಮತ್ತು ದಾನಧರ್ಮಗಳಿಗೆ ಮೀಸಲಾದ ಪವಿತ್ರ ಕಾಲ. ಈ ಅವಧಿಯಲ್ಲಿ ದೇವರ ನಾಮಸ್ಮರಣೆ ಮಾಡಿದರೆ ಜೀವನದಲ್ಲಿ ನೆಮ್ಮದಿ ಮತ್ತು ಸಾರ್ಥಕತೆ ದೊರೆಯುತ್ತದೆ."
> **– ಗುರುರಾಜ ಪಾಟೀಲ ಕುಲಕರ್ಣಿ,** ಅಧ್ಯಕ್ಷರು, ಸೋಮೇಶ್ವರ ಭಕ್ತರ ಕಮಿಟಿ

ಕಾರ್ಯಕ್ರಮದಲ್ಲಿ ಮಾತನಾಡಿದ ವಿಪ್ರ ಸಮಾಜದ ಅಧ್ಯಕ್ಷ ಗೋಪಾಲ ಫಡ್ನಿಸ್ ಹಾಗೂ ಸೋಮೇಶ್ವರ ಭಕ್ತರ ಕಮಿಟಿ ಅಧ್ಯಕ್ಷ ಗುರುರಾಜ ಪಾಟೀಲ ಕುಲಕರ್ಣಿ, ಹಿಂದೂ ಧರ್ಮದಲ್ಲಿ ಅಧಿಕ ಮಾಸಕ್ಕೆ ವಿಶೇಷ ಮಹತ್ವವಿದ್ದು, ಈ ಮಾಸದ ಅಧಿಪತಿ ಶ್ರೀಮನ್ನಾರಾಯಣನಾಗಿದ್ದಾನೆ. ಈ ಅವಧಿಯಲ್ಲಿ ವಿಷ್ಣು ಸಹಸ್ರನಾಮ ಪಠಣ, ಜಪ–ತಪ, ಪೂಜೆ ಹಾಗೂ ದಾನಧರ್ಮಗಳನ್ನು ಆಚರಿಸುವುದರಿಂದ ಆತ್ಮಿಕ ಶಾಂತಿ ಮತ್ತು ಪುಣ್ಯ ಲಭಿಸುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸೀಮಂತಿನಿ ಕುಲಕರ್ಣಿ, ಶುಭಾ ಕುಲಕರ್ಣಿ, ಮೇಘಾ ಸಾಹುಕಾರ, ಸಾವಿತ್ರಿ ದೇಶಪಾಂಡೆ, ಲೀಲಾ ಕುಲಕರ್ಣಿ, ಮೀನಾಕ್ಷಿ ಸರದೇಶಪಾಂಡೆ, ಜಯಶ್ರೀ ಪಾಟೀಲ ಕುಲಕರ್ಣಿ, ರಾಧಿಕಾ ಕುಲಕರ್ಣಿ, ರಮಾ ರಾಯಚೂರ, ಜಯಮ್ಮ ಪಾಟೀಲ, ವೀಣಾ ಫಡ್ನಿಸ್, ಚೇತನಾ ಪೂಜಾರ ಸೇರಿದಂತೆ ಭಜನಾ ಮಂಡಳಿಯ ಸದಸ್ಯರು ಉಪಸ್ಥಿತರಿದ್ದರು.

### ಘನ ತ್ಯಾಜ್ಯ ನಿರ್ವಹಣೆಯಲ್ಲಿ ಜಾಗೃತಿ ಮತ್ತು ಸುರಕ್ಷತೆಗೆ ಆದ್ಯತೆ ನೀಡಲು ಡಿಸಿ ಕರೆ

# ಸ್ವಚ್ಛತೆ ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಸ್ವಚ್ಛತೆ ದೇವರಿಗೆ ಸಮಾನವಾಗಿದ್ದು, ನಮ್ಮ ದೇಹದಂತೆ ಸುತ್ತಮುತ್ತಲಿನ ಪರಿಸರವನ್ನೂ ಸ್ವಚ್ಛವಾಗಿಟ್ಟುಕೊಳ್ಳಬೇಕು. ಸ್ವಚ್ಛ ವಾತಾವರಣದಿಂದ ಅನಾರೋಗ್ಯವನ್ನು ದೂರವಿಡಲು ಸಾಧ್ಯ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.




ನಗರದ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಹಾಗೂ ನಗರಸಭೆ ಗದಗ–ಬೆಟಗೇರಿ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಪೌರಕಾರ್ಮಿಕರು ಮತ್ತು ಸ್ವಚ್ಛತಾ ಕೆಲಸಗಾರರಿಗೆ ಘನ ತ್ಯಾಜ್ಯ ನಿರ್ವಹಣೆ ಹಾಗೂ ಸುರಕ್ಷತಾ ಪರಿಕರಗಳ ಬಳಕೆ ಕುರಿತ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ತ್ಯಾಜ್ಯವನ್ನು ಹಸಿಕಸ, ಒಣಕಸ, ಸ್ಯಾನಿಟರಿ ತ್ಯಾಜ್ಯ ಹಾಗೂ ವಿಶೇಷ ಕಾಳಜಿ ತ್ಯಾಜ್ಯ ಎಂದು ಮೂಲದಲ್ಲಿಯೇ ವಿಂಗಡಿಸುವುದರಿಂದ ಸಮರ್ಪಕ ನಿರ್ವಹಣೆ ಸಾಧ್ಯವಾಗುತ್ತದೆ. ನಗರಗಳ ಬೆಳವಣಿಗೆಯೊಂದಿಗೆ ತ್ಯಾಜ್ಯದ ಪ್ರಮಾಣ ಹೆಚ್ಚುತ್ತಿರುವುದರಿಂದ ವೈಜ್ಞಾನಿಕ ನಿರ್ವಹಣೆ ಅಗತ್ಯವಾಗಿದೆ ಎಂದು ಹೇಳಿದರು.

> "ಸ್ವಚ್ಛತೆ ಕೇವಲ ಪೌರಕಾರ್ಮಿಕರ ಜವಾಬ್ದಾರಿ ಅಲ್ಲ. ಪ್ರತಿಯೊಬ್ಬ ನಾಗರಿಕನೂ ತ್ಯಾಜ್ಯವನ್ನು ಮೂಲದಲ್ಲಿಯೇ ವಿಂಗಡಿಸಿ ಸ್ವಚ್ಛ ಪರಿಸರ ನಿರ್ಮಾಣಕ್ಕೆ ಕೈಜೋಡಿಸಬೇಕು."
> – ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ದಿವಾಣಿ ನ್ಯಾಯಾಧೀಶ ಸಿ.ಎಸ್. ಶಿವನಗೌಡ್ರ ಮಾತನಾಡಿ, 2013ರ ಮ್ಯಾನುವಲ್ ಸ್ಕ್ಯಾವೆಂಜರ್ಸ್ ನಿಷೇಧ ಮತ್ತು ಪುನರ್ವಸತಿ ಕಾಯ್ದೆಯಡಿ ಪೌರಕಾರ್ಮಿಕರ ಹಕ್ಕುಗಳಿಗೆ ವಿಶೇಷ ರಕ್ಷಣೆ ಕಲ್ಪಿಸಲಾಗಿದೆ. ಪೌರಕಾರ್ಮಿಕರಿಗೆ ಉಚಿತ ಕಾನೂನು ನೆರವು ಸೇರಿದಂತೆ ವಿವಿಧ ಸೌಲಭ್ಯಗಳನ್ನು ಪ್ರಾಧಿಕಾರ ಒದಗಿಸುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ, ಸಫಾಯಿ ಕರ್ಮಚಾರಿ ಸಂಘದ ನಾಮನಿರ್ದೇಶಿತ ಸದಸ್ಯರಾದ ಎಸ್.ಎನ್. ಬಳ್ಳಾರಿ ಹಾಗೂ ಮುತ್ತು ಬಿಳೆಯಲಿ ಮಾತನಾಡಿ, ಪೌರಕಾರ್ಮಿಕರ ಆರೋಗ್ಯ, ಸುರಕ್ಷತೆ ಮತ್ತು ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಕರೆ ನೀಡಿದರು.

# ಎಚ್.ಕೆ. ಪಾಟೀಲ ಕಡೆಗಣನೆಗೆ ಆಕ್ರೋಶ

▶▶ ಮೊದಲನೇ ಪುಟದಿಂದ

**ಸಮಾವೇಶದಲ್ಲಿ ಏಕಸ್ವರದ ಆಗ್ರಹ** : ಮುಳಗುಂದ ನಾಕಾದಲ್ಲಿ ಮೆರವಣಿಗೆ ಬೃಹತ್ ಸಮಾವೇಶವಾಗಿ ಮಾರ್ಪಟ್ಟಿತು. ಈ ಸಂದರ್ಭದಲ್ಲಿ ಮಾತನಾಡಿದ ಮುಖಂಡರು, ಎಚ್.ಕೆ. ಪಾಟೀಲ ಅವರು ಕೇವಲ ಗದಗ ಕ್ಷೇತ್ರದ ಶಾಸಕರಲ್ಲ, ಇಡೀ ರಾಜ್ಯದ ರಾಜಕೀಯ ಆಸ್ತಿ. ಆಡಳಿತ, ಕಾನೂನು, ಅಭಿವೃದ್ಧಿ ಮತ್ತು ಸಾರ್ವಜನಿಕ ಜೀವನದ ಅಪಾರ ಅನುಭವ ಹೊಂದಿರುವ ಅವರನ್ನು ಸಚಿವ ಸಂಪುಟದಲ್ಲಿ ಸೇರಿಸಿಕೊಳ್ಳುವುದು ರಾಜ್ಯದ ಹಿತದೃಷ್ಟಿಯಿಂದ ಅಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಹಾವೇರಿ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಕೊಟ್ರಪ್ಪ ಬಸೇಗಣ್ಣಿ, ಸುಜಾತಾ ದೊಡ್ಡಮನಿ, ಗುರಣ್ಣ ಬಳಗಾನೂರ, ರವಿ ಮೂಲಿಮನಿ, ಬಸವರಾಜ ಸುಂಕಾಪೂರ, ನೀಲಮ್ಮ ಬೋಳನವರ, ಅಶೋಕ ಮಂದಾಲಿ, ಬರಕತ್ ಅಲಿ ಮುಲ್ಲಾ, ವಾಸಣ್ಣ ಕುರುಡಗಿ, ಬಸವರಾಜ ಕಡೆಮನಿ, ಶಾಂತಣ್ಣ ಮುಳವಾಡ, ಬಿ.ಆರ್. ದೇವರಡ್ಡಿ, ಮಹಮ್ಮದ್ ಶಾಲಗಾರ, ಮಾಂತೇಶ ಮಡಿವಾಳರ, ಪರಪ್ಪ ಕಮತರ, ಸರಫರಾಜ್ ಬಬರ್ಚಿ, ಮೋಹನ ದುರಗಣ್ಣವರ, ಚಂದ್ರಪ್ಪ ಕರಿಕಟ್ಟಿ, ಪೀರಸಾಬ ಕೌತಾಳ, ಅಕ್ಬರ್ ಸಾಬ್ ಬಬರ್ಚಿ, ಎಸ್.ಪಿ. ಬಳಿಗಾರ ಸೇರಿದಂತೆ ಸಾವಿರಾರು ಜನರು ಪಾಲ್ಗೊಂಡಿದ್ದರು.

### ಜನ್ಮದಿನದ ಅಂಗವಾಗಿ ಉಚಿತ ಕಿಟ್ ವಿತರಿಸಿ ಮಾದರಿಯಾದ ಯುವ ಮುಖಂಡ ಪ್ರಭುರಾಜಗೌಡ

# ವಿದ್ಯಾರ್ಥಿಗಳಿಗೆ ನೆರವು, ರೈತರಿಗೆ ಪ್ರೋತ್ಸಾಹ

**■ ವಿಜಯಸಾಕ್ಷಿ ಸುದ್ದಿ, ಗದಗ**

ಜೆಡಿಎಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ಕನ್ನಡ ಜಾಗೃತಿ ವೇದಿಕೆಯ ರಾಜ್ಯ ಕಾರ್ಯದರ್ಶಿಗಳಾದ, ರೈತಪರ ಯುವ ಮುಖಂಡ ಪ್ರಭುರಾಜಗೌಡ ವಿ. ಪಾಟೀಲ ಅವರ ಜನ್ಮದಿನದ ಅಂಗವಾಗಿ ನಗರದ ಶ್ರೀ ದುರ್ಗಾದೇವಿ ಶಿಕ್ಷಣ ಸಂಸ್ಥೆಯಲ್ಲಿ ವಿದ್ಯಾರ್ಥಿಗಳಿಗೆ ಉಚಿತ ವಿದ್ಯಾಕಿಟ್ ಹಾಗೂ ರೈತರಿಗೆ ಸಾವಯವ ಗೊಬ್ಬರದ ಕಿಟ್‌ಗಳನ್ನು ವಿತರಿಸುವ ಮೂಲಕ ಜನ್ಮದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಪ್ರಭುರಾಜಗೌಡ ಪಾಟೀಲ ಅವರ ಸ್ನೇಹಿತರ ಬಳಗದ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಶಾಲೆಯ ಎಲ್ಲ ವಿದ್ಯಾರ್ಥಿಗಳಿಗೆ ನೋಟ್ ಪುಸ್ತಕ ಹಾಗೂ ಇತರೆ ಶೈಕ್ಷಣಿಕ ಸಾಮಗ್ರಿಗಳ ಕಿಟ್ ವಿತರಿಸಲಾಯಿತು. ಇದೇ ವೇಳೆ ರೈತರಿಗೆ ಸಾವಯವ ಕೃಷಿ ಉತ್ತೇಜಿಸುವ ಉದ್ದೇಶದಿಂದ ಸಾವಯವ ಗೊಬ್ಬರದ ಕಿಟ್‌ಗಳನ್ನು ಉಚಿತವಾಗಿ ನೀಡಲಾಯಿತು.



ಕಾರ್ಯಕ್ರಮದಲ್ಲಿ ಅತಿಥಿಯಾಗಿ ಭಾಗವಹಿಸಿದ್ದ ವೈದ್ಯ ಹಾಗೂ ಸಾಮಾಜಿಕ ಕಾರ್ಯಕರ್ತ ಡಾ. ಗಣೇಶ ಸುಲ್ತಾನಪೂರ ಮಾತನಾಡಿ, ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಕಿಟ್ ಹಾಗೂ ರೈತರಿಗೆ ಸಾವಯವ ಕೃಷಿ ಕಿಟ್ ವಿತರಿಸುವ ಮೂಲಕ ಸಮಾಜಕ್ಕೆ ಉತ್ತಮ ಸಂದೇಶ ನೀಡಲಾಗಿದೆ. ಕಳೆದ ಎರಡು ದಶಕಗಳಿಂದ ಕನ್ನಡಪರ, ರೈತಪರ ಹಾಗೂ ಸಾಮಾಜಿಕ ಸೇವೆಯಲ್ಲಿ ತೊಡಗಿಸಿಕೊಂಡಿರುವ ಪ್ರಭುರಾಜಗೌಡ ಪಾಟೀಲ ಯುವಜನತೆಗೆ ಮಾದರಿಯಾಗಿದ್ದಾರೆ ಎಂದು ಹೇಳಿದರು.

> "ವಿದ್ಯಾರ್ಥಿಗಳಿಗೆ ಶಿಕ್ಷಣ ಮತ್ತು ರೈತರಿಗೆ ಸಾವಯವ ಕೃಷಿಯ ಅರಿವು ನೀಡುವ ಕಾರ್ಯಗಳು ಸಮಾಜಮುಖಿ ಚಟುವಟಿಕೆಗಳಾಗಿವೆ. ಯುವಕರು ಸಮಾಜ ಸೇವೆಯಲ್ಲಿ ತೊಡಗಿಸಿಕೊಳ್ಳುವುದು ಅಗತ್ಯ."
> – ಡಾ. ಗಣೇಶ ಸುಲ್ತಾನಪೂರ

ಅಧ್ಯಕ್ಷತೆ ವಹಿಸಿದ್ದ ಶ್ರೀ ದುರ್ಗಾದೇವಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ವೆಂಕಟೇಶ ಇಮರಾಪೂರ ಮಾತನಾಡಿ, ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಸಾಮಗ್ರಿ ಹಾಗೂ ರೈತರಿಗೆ ಸಾವಯವ ಗೊಬ್ಬರ ವಿತರಿಸಿರುವುದು ಶ್ಲಾಘನೀಯ ಕಾರ್ಯವಾಗಿದೆ. ರೈತರು ಸಾವಯವ ಕೃಷಿಗೆ ಹೆಚ್ಚಿನ ಆದ್ಯತೆ ನೀಡುವ ಮೂಲಕ ವಿಷಮುಕ್ತ ಆಹಾರ ಉತ್ಪಾದನೆಗೆ ಮುಂದಾಗಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಶ್ರೀ ದುರ್ಗಾದೇವಿ ಶಿಕ್ಷಣ ಸಂಸ್ಥೆ ಹಾಗೂ ಡಾ. ಗಣೇಶ ಸುಲ್ತಾನಪೂರ ಅವರ ವತಿಯಿಂದ ಪ್ರಭುರಾಜಗೌಡ ಪಾಟೀಲ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಪ್ರಭುರಾಜಗೌಡ ಪಾಟೀಲ, ವಿದ್ಯಾರ್ಥಿಗಳು ಉತ್ತಮ ಶಿಕ್ಷಣದೊಂದಿಗೆ ಶಿಸ್ತು, ಸಂಸ್ಕಾರಗಳನ್ನು ರೂಢಿಸಿಕೊಳ್ಳಬೇಕು. ರಾಸಾಯನಿಕ ಗೊಬ್ಬರಗಳ ಅತಿಯಾದ ಬಳಕೆಯಿಂದ ಮಣ್ಣಿನ ಫಲವತ್ತತೆ ಕುಂಠಿತವಾಗುತ್ತಿದ್ದು, ರೈತರು ಸಾವಯವ ಕೃಷಿಯತ್ತ ಮುಖ ಮಾಡಿದರೆ ಕಡಿಮೆ ವೆಚ್ಚದಲ್ಲಿ ಉತ್ತಮ ಇಳುವರಿ ಪಡೆಯಬಹುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪ್ರಗತಿಪರ ರೈತರಾದ ಈರಪ್ಪ ಜಡಿ, ವೀರುಪಾಕ್ಷಪ್ಪ ಕೋತಂಬ್ರಿ, ಬಾಪುಗೌಡ ಮಲ್ಲಾಪೂರ, ಯುವ ಮುಖಂಡರಾದ ಚೇತನಕುಮಾರ ಹುಡೇದ, ಅಜಯ ಕುಲಕರ್ಣಿ, ಸಂತೋಷ ಪಾಟೀಲ, ಯಲ್ಲಪ್ಪ ಜಡಿ, ಸಂಗಪ್ಪ ಮೇಟಿ, ಶಿಕ್ಷಣ ಸಂಸ್ಥೆಯ ಪ್ರಮುಖರಾದ ಡಾ. ಮುತ್ತು ಜಡಿ, ಹೀರಾಲಾಲ ಸಿಂಗ್ರಿ, ರುದ್ರಗೌಡ ಪಾಟೀಲ, ಲೋಕೇಶ ಮಲ್ಲಿಗವಾಡ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಮಹಿಳಾ ಆರೋಪಿತೆ ಬಂಧನ; ₹4.70 ಲಕ್ಷ ಮೌಲ್ಯದ ಚಿನ್ನಾಭರಣ ವಶ

# ಮನೆ ಕಳ್ಳತನ: ಮಹಿಳೆ ಬಂಧನ

**■ ವಿಜಯಸಾಕ್ಷಿ ಸುದ್ದಿ, ನವಲಗುಂದ**

ನವಲಗುಂದ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದ ಮನೆ ಕಳ್ಳತನ ಪ್ರಕರಣವನ್ನು ಪೊಲೀಸರು ಭೇದಿಸಿ ಮಹಿಳಾ ಆರೋಪಿತೆಯನ್ನು ಬಂಧಿಸಿದ್ದಾರೆ. ಬಂಧಿತ ಆರೋಪಿತೆಯಿಂದ □4.70 ಲಕ್ಷ ಮೌಲ್ಯದ 42.79 ಗ್ರಾಂ ಬಂಗಾರದ ಆಭರಣಗಳನ್ನು ವಶಪಡಿಸಿಕೊಳ್ಳಲಾಗಿದೆ.

ಬಳ್ಳೂರ ಗ್ರಾಮದ ಶೈಲಾ ಸಿದ್ದಯ್ಯ ಹಿರೇಮಠ ಅವರು ತಮ್ಮ ಮನೆಯಲ್ಲಿ ಕಳ್ಳತನವಾಗಿರುವ ಕುರಿತು ನೀಡಿದ ದೂರಿನ ಆಧಾರದ ಮೇಲೆ ನವಲಗುಂದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಪ್ರಕರಣ ದಾಖಲಾದ ಕೂಡಲೇ ನವಲಗುಂದ ವೃತ್ತದ ಸಿಪಿಐ ರವಿಕುಮಾರ ಕಪ್ಪತನವರ ನೇತೃತ್ವದಲ್ಲಿ ತನಿಖಾ ತಂಡ ರಚಿಸಿ ವಿವಿಧ ಆಯಾಮಗಳಲ್ಲಿ ತನಿಖೆ ಕೈಗೊಳ್ಳಲಾಯಿತು.



ಗ್ರಾಮದ ಸುತ್ತಮುತ್ತಲಿನ ನಿವಾಸಿಗಳಿಂದ ಮಾಹಿತಿ ಸಂಗ್ರಹಿಸಿ, ದೊರೆತ ಸುಳಿವಿನ ಆಧಾರದ ಮೇಲೆ ಅನುಮಾನಾಸ್ಪದವಾಗಿ ವರ್ತಿಸುತ್ತಿದ್ದ ಮಹಿಳೆಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಕಳ್ಳತನ ಕೃತ್ಯ ಎಸಗಿರುವುದಾಗಿ ಒಪ್ಪಿಕೊಂಡಿದ್ದಾಳೆ. ಬಳಿಕ ಆರೋಪಿತೆಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

> "ಪ್ರಕರಣ ದಾಖಲಾದ ತಕ್ಷಣವೇ ವಿಶೇಷ ತಂಡ ರಚಿಸಿ ತನಿಖೆ ಕೈಗೊಳ್ಳಲಾಯಿತು. ಸಾರ್ವಜನಿಕರ ಸಹಕಾರ ಮತ್ತು ಸಿಬ್ಬಂದಿಯ ಸಮನ್ವಯದಿಂದ ಆರೋಪಿತೆಯನ್ನು ಪತ್ತೆಹಚ್ಚಿ ಕಳುವಾದ ಚಿನ್ನಾಭರಣವನ್ನು ವಶಪಡಿಸಿಕೊಳ್ಳಲು ಸಾಧ್ಯವಾಯಿತು."
> – ರವಿ. ಕಪ್ಪತನವರ್, ಸಿಪಿಐ, ನವಲಗುಂದ

ಆರೋಪಿತೆಯಿಂದ 42.79 ಗ್ರಾಂ ತೂಕದ ಬಂಗಾರದ ಆಭರಣಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಅವುಗಳ ಅಂದಾಜು ಮೌಲ್ಯ ₹4,70,690 ಎಂದು ಪೊಲೀಸರು ತಿಳಿಸಿದ್ದಾರೆ.

ಈ ಕಾರ್ಯಾಚರಣೆ ಪೊಲೀಸ್ ಅಧೀಕ್ಷಕ ಗುಂಜನ್ ಆರ್ಯ, ಡಿಎಸ್‌ಪಿ ಶಿವಾನಂದ ಕಟಗಿ ಹಾಗೂ ಪೊಲೀಸ್ ಉಪಾಧೀಕ್ಷಕ ವಿನೋದ ಮುಕ್ತೇದಾರ ಅವರ ಮಾರ್ಗದರ್ಶನದಲ್ಲಿ ನಡೆದಿದ್ದು, ಸಿಪಿಐ ರವಿಕುಮಾರ ಕಪ್ಪತನವರ ನೇತೃತ್ವದ ತಂಡದಲ್ಲಿ ಪಿಎಸ್‌ಐ ಜನಾರ್ದನ ಬಿ. ಹಾಗೂ ಪೊಲೀಸ್ ಸಿಬ್ಬಂದಿ ಪಾಲ್ಗೊಂಡಿದ್ದರು.

### ದ್ವಿಭಾಷಾ ಕಲಿಕೆ ಹೆಸರಲ್ಲಿ ಕನ್ನಡ ಮಾಧ್ಯಮಕ್ಕೆ ಅನ್ಯಾಯವಾಗುತ್ತಿದೆ ಎಂದು ಎಐಡಿಎಸ್‌ಓ ಆರೋಪ

# ಕನ್ನಡ ವಿದ್ಯಾರ್ಥಿಗಳಿಗೆ 'ಬಿ ಶ್ರೇಣಿ' ನೀಡುವುದು ಖಂಡನೀಯ

**■ ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರಿ ಶಾಲೆಗಳಲ್ಲಿ ದ್ವಿಭಾಷಾ ಮಾಧ್ಯಮದ ಹೆಸರಿನಲ್ಲಿ ಕನ್ನಡ ಮಾಧ್ಯಮದಲ್ಲಿ ಉತ್ತರಿಸುವ ವಿದ್ಯಾರ್ಥಿಗಳಿಗೆ 'ಬಿ ಶ್ರೇಣಿ' ಹಾಗೂ ಇಂಗ್ಲಿಷ್ ಮಾಧ್ಯಮದಲ್ಲಿ ಉತ್ತರಿಸುವವರಿಗೆ ಮಾತ್ರ 'ಎ ಶ್ರೇಣಿ' ನೀಡುತ್ತಿರುವ ಕ್ರಮವನ್ನು ಎಐಡಿಎಸ್‌ಓ (ಅಖಿಲ ಭಾರತ ಪ್ರಜಾಸತ್ತಾತ್ಮಕ ವಿದ್ಯಾರ್ಥಿ ಸಂಘಟನೆ) ತೀವ್ರವಾಗಿ ಖಂಡಿಸಿದೆ.



ಸೇತುಬಂಧ ಪರೀಕ್ಷೆಗಳ ಮೌಲ್ಯಮಾಪನದಲ್ಲಿ ಈ ಮಾನದಂಡವನ್ನು ಅನುಸರಿಸುತ್ತಿರುವುದು ಭಾಷಾ ಆಯ್ಕೆಯ ಸ್ವಾತಂತ್ರ್ಯದ ಉಲ್ಲಂಘನೆಯಾಗಿದ್ದು, ಕನ್ನಡ ಮಾಧ್ಯಮದ ವಿದ್ಯಾರ್ಥಿಗಳ ವಿರುದ್ಧ ತಾರತಮ್ಯ ಎಸಗಿದಂತಾಗಿದೆ ಎಂದು ಸಂಘಟನೆ ಆರೋಪಿಸಿದೆ.

ಪ್ರಾಥಮಿಕ ಶಿಕ್ಷಣದಲ್ಲಿ ಮಾತೃಭಾಷೆಗೆ ಉತ್ತೇಜನ ನೀಡಬೇಕೆಂದು ಸುಪ್ರೀಂಕೋರ್ಟ್ ನೀಡಿರುವ ನಿರ್ದೇಶನಗಳಿಗೂ ಈ ಕ್ರಮ ವಿರುದ್ಧವಾಗಿದೆ. ಪ್ರಾಥಮಿಕ ಹಂತದಲ್ಲಿ ಮಾತೃಭಾಷಾ ಶಿಕ್ಷಣವನ್ನು ಬಲಪಡಿಸುವ ಬದಲು ಕನ್ನಡಕ್ಕೆ ಎರಡನೇ ಸ್ಥಾನ ನೀಡುವ ರೀತಿಯಲ್ಲಿ ಸರ್ಕಾರ ನಡೆದುಕೊಳ್ಳುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಪಾಲಕರೊಂದಿಗೆ ಸಮಾಲೋಚನೆ ನಡೆಸದೆ ದ್ವಿಭಾಷಾ ಮಾಧ್ಯಮವನ್ನು ಜಾರಿಗೊಳಿಸಿರುವುದೇ ಇಂತಹ ಸಮಸ್ಯೆಗಳಿಗೆ ಕಾರಣವಾಗಿದೆ. ಮಾತೃಭಾಷಾ ಶಿಕ್ಷಣವು ವಿದ್ಯಾರ್ಥಿಗಳ ಮಾನಸಿಕ ಬೆಳವಣಿಗೆಗೆ ಮೂಲಾಧಾರವಾಗಿದ್ದು, ಶಿಕ್ಷಣ ತಜ್ಞರ ಅಭಿಪ್ರಾಯಗಳನ್ನು ಕಡೆಗಣಿಸಿ ಸರ್ಕಾರ ನಡೆದುಕೊಳ್ಳುತ್ತಿದೆ ಎಂದು ಎಐಡಿಎಸ್‌ಓ ಆರೋಪಿಸಿದೆ.

ಕನ್ನಡ ಮಾಧ್ಯಮದ ಆಯ್ಕೆ ಸ್ವಾತಂತ್ರ್ಯವನ್ನು ರಕ್ಷಿಸಿ ಉತ್ತೇಜನ ನೀಡಬೇಕು ಹಾಗೂ ಈ ಅವೈಜ್ಞಾನಿಕ ಮತ್ತು ಅಪ್ರಜಾತಾಂತ್ರಿಕ ಕ್ರಮವನ್ನು ಕೂಡಲೇ ಕೈಬಿಡಬೇಕು ಎಂದು ಎಐಡಿಎಸ್‌ಓ ಜಿಲ್ಲಾ ಸಂಚಾಲಕಿ ಎಂ. ಶಾಂತಿ ಆಗ್ರಹಿಸಿದ್ದಾರೆ.

> "ಕನ್ನಡದಲ್ಲಿ ಉತ್ತರ ಬರೆದ ವಿದ್ಯಾರ್ಥಿಗಳಿಗೆ ಕಡಿಮೆ ಶ್ರೇಣಿ ನೀಡುವುದು ಭಾಷಾ ತಾರತಮ್ಯವಾಗಿದೆ. ಸರ್ಕಾರ ಕೂಡಲೇ ಈ ಕ್ರಮವನ್ನು ಹಿಂಪಡೆದು ಕನ್ನಡ ಮಾಧ್ಯಮದ ವಿದ್ಯಾರ್ಥಿಗಳ ಹಕ್ಕುಗಳನ್ನು ರಕ್ಷಿಸಬೇಕು."
> – ಎಂ. ಶಾಂತಿ, ಜಿಲ್ಲಾ ಸಂಚಾಲಕಿ, ಎಐಡಿಎಸ್‌ಡಿಓ ಗದಗ

### ಗಂಗಿಮಡಿ ಮಸೀದಿಯಲ್ಲಿ ಧರ್ಮಗುರುಗಳು, ಮುಖಂಡರಿಂದ ವಿಶೇಷ ಪ್ರಾರ್ಥನೆ

# ಸಚಿವ ಸ್ಥಾನಕ್ಕಾಗಿ ಎಚ್.ಕೆ. ಪಾಟೀಲ್ ಬೆಂಬಲಿಗರ ಪ್ರಾರ್ಥನೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಹಿರಿಯ ರಾಜಕೀಯ ಮುಖಂಡ ಎಚ್.ಕೆ. ಪಾಟೀಲ್ ಅವರಿಗೆ ಸಚಿವ ಸ್ಥಾನ ದೊರೆಯಲೆಂದು ನಗರದ ಗಂಗಿಮಡಿ ಅಬುಹರೇರ ಮಸೀದಿಯಲ್ಲಿ ಮಂಗಳವಾರ ವಿಶೇಷ ಸಾಮೂಹಿಕ ದುವಾ ಕಾರ್ಯಕ್ರಮ ಆಯೋಜಿಸಲಾಯಿತು.



ಕಾರ್ಯಕ್ರಮದಲ್ಲಿ ಧರ್ಮಗುರುಗಳಾದ ಜನಾಬ್ ಇನಾಯತುಲ್ಲಾ ಸಾಹೇಬ್ ಪೀರಜಾದೆ, ಮೌಲಾನಾ ಅಬ್ದುಲ್ ಗಫೂರ್ ಸಾಹೇಬ್ ಪಲ್ಲೇದ್, ಮೌಲಾನಾ ಅಬ್ದುಲ್ ಸಮದ್ ಜಕಾತಿ, ಹಫೀಜ್ ಅಬೂಬಕರ್, ಹಫೀಜ್ ಸದ್ದಾಂ ಹಾಗೂ ಹಫೀಜ್ ಅಬ್ದುಲ್ಲಾ ಸೇರಿದಂತೆ ಹಲವರು ಭಾಗವಹಿಸಿ, ಎಚ್.ಕೆ. ಪಾಟೀಲ್ ಅವರಿಗೆ ಸಚಿವ ಸಂಪುಟದಲ್ಲಿ ಸ್ಥಾನ ದೊರೆಯುವಂತೆ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

> "ಎಚ್.ಕೆ. ಪಾಟೀಲ್ ಅವರು ದೀರ್ಘಕಾಲದ ರಾಜಕೀಯ ಅನುಭವ ಹೊಂದಿರುವ ಜನನಾಯಕರು. ಅವರ ಸೇವೆಯನ್ನು ಪರಿಗಣಿಸಿ ಸಚಿವ ಸಂಪುಟದಲ್ಲಿ ಸ್ಥಾನ ನೀಡಬೇಕು ಎಂಬುದು ಜನರ ಆಶಯವಾಗಿದೆ."
> – ಸಯ್ಯದ್ ಖಾಲಿದ್ ಕೊಪ್ಪಳ

ಈ ಸಂದರ್ಭದಲ್ಲಿ ಸೈಯದ್ ಖಾಲಿದ್ ಕೊಪ್ಪಳ, ಉಸ್ಮಾನ್ ಮಾಳೆಕೊಪ್ಪ, ಫಾರೂಕ್ ಸಿಂದಗಿ, ಅಕ್ಬರ್ ಅತ್ತಾರ, ಮೊಹಮ್ಮದ್ ಬೆಟಗೇರಿ, ಉಜ್ಜೈರ್, ಮೈನು ಗುಜಮಾಗಡಿ, ಚಾಂದ್ ಸಾಬ್ ಅಬ್ಬಿಗೇರಿ, ಮಹಮ್ಮದ್ ಬೋದ್ಲೆಖಾನ್, ಹಾಫೀಸ್ ರೋಣ, ಬಾಬಾಜಾನ್ ಹಣಗಿ, ಬಾಬಾಜಾನ್ ಕೊಡತಗೇರಿ ಸೇರಿದಂತೆ ಹಲವಾರು ಮುಖಂಡರು ಹಾಗೂ ಭಕ್ತಾದಿಗಳು ಉಪಸ್ಥಿತರಿದ್ದರು.

ಎಚ್.ಕೆ. ಪಾಟೀಲ್ ಅವರ ಅನುಭವ, ಜನಪರ ಸೇವೆ ಹಾಗೂ ಆಡಳಿತಾತ್ಮಕ ಸಾಮರ್ಥ್ಯವನ್ನು ಪರಿಗಣಿಸಿ ಸಚಿವ ಸಂಪುಟದಲ್ಲಿ ಸೂಕ್ತ ಸ್ಥಾನಮಾನ ನೀಡಬೇಕು ಎಂದು ಕಾರ್ಯಕ್ರಮದಲ್ಲಿ ಅಭಿಪ್ರಾಯ ವ್ಯಕ್ತಪಡಿಸಲಾಯಿತು.

ಕಾರ್ಯಕ್ರಮದ ಕೊನೆಯಲ್ಲಿ ರಾಜ್ಯದ ಅಭಿವೃದ್ಧಿ, ಶಾಂತಿ, ಸೌಹಾರ್ದತೆ ಹಾಗೂ ಜನರ ಸುಖ–ಸಮೃದ್ಧಿಗಾಗಿ ವಿಶೇಷ ದುವಾ ಮಾಡಲಾಯಿತು.

### ಹಸಿರು ಅಭಿಯಾನಕ್ಕೆ ಚಾಲನೆ ನೀಡಿದ 2000 ವಿವಿಧ ಸಸ್ಯಗಳ ಬೀಜಗಳು

# ಜನವನದಲ್ಲಿ ಪ್ರೊ. ರವೀಂದ್ರ ಕೊಪ್ಪರ್ ಜನ್ಮದಿನ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗಿನ ಹಿರಿಯ ಸಾಹಿತಿ, ಬರಹಗಾರ ಹಾಗೂ ಸಮಾಜಮುಖಿ ಚಿಂತಕರಾಗಿದ್ದ ಪ್ರೊ. ರವೀಂದ್ರ ಕೊಪ್ಪರ್ ಅವರ 79ನೇ ಜನ್ಮದಿನವನ್ನು ಕಪ್ಪತಗುಡ್ಡದ ಜನವನದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಯಿತು. ಕಪ್ಪತಗುಡ್ಡ ಮೂಲದ ಸುಮಾರು 2000 ವಿವಿಧ ಜಾತಿಯ ಗಿಡಗಳು ಹಾಗೂ ಔಷಧೀಯ ಸಸ್ಯಗಳ ಬೀಜಗಳನ್ನು ವಿತರಿಸುವ ಮೂಲಕ ಪರಿಸರ ಜಾಗೃತಿ ಮತ್ತು ಹಸಿರು ಸಂರಕ್ಷಣೆಯ ಸಂದೇಶ ಸಾರಲಾಯಿತು.



ಪ್ರಕೃತಿಯ ಮಡಿಲಾದ ಜನವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಎಸ್‌ಬಿಐ ಫೌಂಡೇಶನ್‌ನ ಮೇಲಾಧಿಕಾರಿ ಸಿದ್ಧಲಿಂಗೇಶ ಬಳ್ಳೊಳ್ಳಿ ಹಾಗೂ ಸಂಕಲ್ಪ ರೂರಲ್ ಡೆವಲಪ್ಮೆಂಟ್ ಸಂಸ್ಥೆಯ ಸಿಇಓ ಸಿಕಂದರ್ ಮೀರಾನಾಯಕ್ ಅವರಿಗೆ ಪ್ರೊ. ಕೊಪ್ಪರ್ ಅವರ ಮೊಮ್ಮಗ ವಿಹಾನ ರಘೋತ್ತಮ ಕೊಪ್ಪರ್ ವಿವಿಧ ಗಿಡಗಳು ಹಾಗೂ ಔಷಧೀಯ ಸಸ್ಯಗಳ ಬೀಜಗಳನ್ನು ಹಸ್ತಾಂತರಿಸಿದರು.

> "ಕಪ್ಪತಗುಡ್ಡದ ಔಷಧೀಯ ಸಸ್ಯಗಳ ಉಪಯೋಗ ಪ್ರತಿಯೊಬ್ಬರಿಗೂ ದೊರೆಯಬೇಕು. ಕಪ್ಪತಗುಡ್ಡದಲ್ಲಿ ಔಷಧೀಯ ಸಸ್ಯಗಳಿವೆ ಎಂಬುದು ಎಲ್ಲರಿಗೂ ಗೊತ್ತು. ಆದರೆ ಅದರ ಪ್ರಯೋಜನ ಗದಗ ಜಿಲ್ಲೆಯ ಜನರಿಗೆ ಹೇಗೆ ತಲುಪಬೇಕು ಎಂಬ ಕುರಿತು ಗಂಭೀರ ಚಿಂತನೆ ನಡೆಯಬೇಕು. ಈ ನಿಟ್ಟಿನಲ್ಲಿ ಜನಜಾಗೃತಿ ಮೂಡಿಸಲು ಶೀಘ್ರದಲ್ಲೇ ವಿಡಿಯೊಗಳನ್ನೂ ಸಿದ್ಧಪಡಿಸಲಾಗುವುದು."
> – ರಘೋತ್ತಮ ಕೊಪ್ಪರ್

ಈ ಸಂದರ್ಭದಲ್ಲಿ ಮಾತನಾಡಿದ ವಿಹಾನ ಕೊಪ್ಪರ್, ಕಪ್ಪತಗುಡ್ಡದ ಮೇಲಿನ ತಮ್ಮ ತಾತನ ಪ್ರೀತಿ, ಅಲ್ಲಿನ ಔಷಧೀಯ ಸಸ್ಯಗಳ ಮಹತ್ವ ಮತ್ತು ಪರಿಸರದ ಬಗ್ಗೆ ಅವರ ಕಾಳಜಿಯನ್ನು ಸ್ಮರಿಸಿದರು.

ಎಸ್‌ಬಿಐ ಫೌಂಡೇಶನ್‌ನ ಸಿದ್ಧಲಿಂಗೇಶ ಬಳ್ಳೊಳ್ಳಿ ಹಾಗೂ ಸಂಕಲ್ಪ ರೂರಲ್ ಡೆವಲಪ್ಮೆಂಟ್ ಸಂಸ್ಥೆಯ ಸಿಇಓ ಸಿಕಂದರ್ ಮೀರಾನಾಯಕ್ ಮಾತನಾಡಿ, ಜನವನದಲ್ಲಿ ಇಂತಹ ಕಾರ್ಯಕ್ರಮ ಆಯೋಜಿಸಿರುವುದನ್ನು ಶ್ಲಾಘಿಸಿದರು. ಜನವನವು ಗದಗ ಜಿಲ್ಲೆಯ ಜನರಿಗೆ ಪರಿಸರ ಹಾಗೂ ಸಾಮಾಜಿಕ ಚಟುವಟಿಕೆಗಳ ಉತ್ತಮ ವೇದಿಕೆಯಾಗಬಹುದು ಎಂದು ಅಭಿಪ್ರಾಯಪಟ್ಟರು.

ಸಿಕಂದರ್ ಮೀರಾನಾಯಕ್ ಅವರು ಪ್ರೊ. ಕೊಪ್ಪರ್ ಅವರ ಸಾಹಿತ್ಯ ಕ್ಷೇತ್ರದ ಕೊಡುಗೆ, ಸುಮಾರು 40 ಪಠ್ಯಪುಸ್ತಕಗಳ ರಚನೆ, ಹಿಪ್ನಾಟಿಸಂ ಮತ್ತು ಆಯುರ್ವೇದ ಕ್ಷೇತ್ರದಲ್ಲಿನ ಅವರ ಆಸಕ್ತಿ ಹಾಗೂ ಸಾಮಾಜಿಕ ನ್ಯಾಯಕ್ಕಾಗಿ ನಡೆಸಿದ ಹೋರಾಟಗಳನ್ನು ಸ್ಮರಿಸಿದರು.

ರಘೋತ್ತಮ ಕೊಪ್ಪರ್ ಮಾತನಾಡಿ, ಪ್ರತಿವರ್ಷ ತಮ್ಮ ತಂದೆಯವರ ಜನ್ಮದಿನವನ್ನು ವಿಶೇಷ ಕಾರ್ಯಕ್ರಮಗಳ ಮೂಲಕ ಆಚರಿಸುತ್ತಿದ್ದು, ಈ ಬಾರಿ ಔಷಧೀಯ ಹಾಗೂ ಇತರ ಸಸ್ಯಗಳ ಬೀಜ ವಿತರಣೆಯ ಮೂಲಕ ಆಚರಿಸಲಾಗಿದೆ ಎಂದು ಹೇಳಿದರು. ಸಂಕಲ್ಪ ಸಂಸ್ಥೆಯವರು ಈ ಬೀಜಗಳನ್ನು ಮಣ್ಣಿನ ಉಂಡೆಗಳ ರೂಪದಲ್ಲಿ ಕಪ್ಪತಗುಡ್ಡದ ವಿವಿಧ ಭಾಗಗಳು ಹಾಗೂ ಜನವನದಲ್ಲಿ ಬಿತ್ತುವ ಮೂಲಕ ಹಸಿರು ಕಾರ್ಯವನ್ನು ಮುಂದುವರಿಸಲಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ರೀಲ್ಸ್ ಸಂಕಲನಕಾರ ಭೀಮ ಬೆನಹಾಳ, ರಮೇಶ ಬೊಮ್ಮನಗೌಡರ್, ನಾಗಾವಿ, ಕಳಸಾಪುರ ಗ್ರಾಮಸ್ಥರು ಹಾಗೂ ಜನವನದ ಸಿಬ್ಬಂದಿ ಉಪಸ್ಥಿತರಿದ್ದರು.

### ಅರ್ಹ ಫಲಾನುಭವಿಗಳಿಗೆ ಸೌಲಭ್ಯ ತಲುಪಿಸಲು ಅಧಿಕಾರಿಗಳಿಗೆ ಖಡಕ್ ಸೂಚನೆ

# ಗ್ಯಾರಂಟಿ ಯೋಜನೆಗಳಲ್ಲಿ ನಿರ್ಲಕ್ಷ್ಯ ಬೇಡ

**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ತಾಲೂಕು ಪಂಚಾಯಿತಿ ಮಹಾತ್ಮಗಾಂಧಿ ಸಭಾಂಗಣದಲ್ಲಿ ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಸೊನ್ನದ ಗುರುಬಸವರಾಜ್ ಅಧ್ಯಕ್ಷತೆಯಲ್ಲಿ ನಡೆಯಿತು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಸಾರಿಗೆ ಇಲಾಖೆ, ಆಹಾರ ಇಲಾಖೆ, ಕೆಇಬಿ ಹಾಗೂ ಉದ್ಯೋಗ ವಿನಿಮಯ ಕಚೇರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿ ತಮ್ಮ ಇಲಾಖೆಗಳ ಪ್ರಗತಿ ವರದಿಯನ್ನು ಮಂಡಿಸಿದರು.

ತಾಲೂಕಿನಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪುತ್ತಿದ್ದು, ಯಾವುದೇ ಲೋಪದೋಷಗಳಿಗೆ ಅವಕಾಶ ನೀಡದೆ ಕಾರ್ಯನಿರ್ವಹಿಸಬೇಕು ಎಂದು ಸೊನ್ನದ ಗುರುಬಸವರಾಜ್ ಅಧಿಕಾರಿಗಳಿಗೆ ಸೂಚಿಸಿದರು.

ಯುವನಿಧಿ ಯೋಜನೆಯಡಿ ನೋಂದಾಯಿತ ಫಲಾನುಭವಿಗಳಿಗೆ "ಯುವನಿಧಿ ಪ್ಲಸ್" ಕಾರ್ಯಕ್ರಮದ ಮೂಲಕ ಕೌಶಲ್ಯ ತರಬೇತಿ ನೀಡಿ ವಿವಿಧ ಕಂಪನಿಗಳು ಹಾಗೂ ಕೈಗಾರಿಕೆಗಳಲ್ಲಿ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ಡಿಗ್ರಿ ಕಾಲೇಜಿನಲ್ಲಿ ಸಮಾವೇಶ ಆಯೋಜಿಸಲು ಪ್ರಯತ್ನಿಸಲಾಗಿತ್ತು. ಆದರೆ ಅದಕ್ಕೆ ಅವಕಾಶ ದೊರೆಯದಿರುವುದು ಯುವಕರಿಗೆ ಅನ್ಯಾಯವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು. ಮುಂದಿನ ದಿನಗಳಲ್ಲಿ ಜಿಲ್ಲಾಧಿಕಾರಿ ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಅನುಮತಿ ಪಡೆದು ಕಾರ್ಯಕ್ರಮ ಆಯೋಜಿಸಲಾಗುವುದು ಎಂದು ತಿಳಿಸಿದರು.


ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಪ್ರಾಧಿಕಾರದ ಉಪಾಧ್ಯಕ್ಷ ಜಂದಿಸಾಹೇಬ್, ಸದಸ್ಯ ಪರಶುರಾಮ ಹೆಗ್ಡಾಳ, ತಾಲೂಕು ಸದಸ್ಯರಾದ ರಾಘು ಉಲವತ್ತಿ, ಮೇಟಿ ಮಂಜುನಾಥ, ತಂಬ್ರಳ್ಳಿ ಗಿರೀಶ್, ವೆಂಕಟೇಶ್ ನಾಯ್ಕ್, ಸಂತೋಷ, ಸರ್ದಾರ್ ರಾಮಣ್ಣ, ಪ್ರಕಾಶ್ ಉಪ್ಪಾರ್, ಸದ್ದಾಂ, ದೊಡ್ಡಬಸಪ್ಪ, ನಾಗಮ್ಮ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಗ್ಯಾರಂಟಿ ಸಮಿತಿ ಕಾರ್ಯದರ್ಶಿ ಪಾಲಯ್ಯನಕೋಟೆ ವಿಶ್ವನಾಥ್, ಯೋಜನಾ ಅಧಿಕಾರಿ ನಾಗರಾಜ್ ನಾಯ್ಕ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.



> "ಪಂಚ ಗ್ಯಾರಂಟಿ ಯೋಜನೆಗಳ ಸೌಲಭ್ಯಗಳು ಅರ್ಹರಿಗೆ ತಲುಪುವಲ್ಲಿ ಯಾವುದೇ ನಿರ್ಲಕ್ಷ್ಯವಾಗಬಾರದು. ಯುವನಿಧಿ ಯೋಜನೆಯ ಫಲಾನುಭವಿಗಳಿಗೆ ಉದ್ಯೋಗಾವಕಾಶ ಕಲ್ಪಿಸಲು ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು."
> **– ಸೊನ್ನದ ಗುರುಬಸವರಾಜ್,** ಅಧ್ಯಕ್ಷರು, ತಾಲೂಕು ಗ್ಯಾರಂಟಿ ಸಮಿತಿ

# ಇಂದು ಕೊಟ್ಟೂರೇಶ್ವರ ಜಾತ್ರಾ ಮಹೋತ್ಸವಕ್ಕೆ ಚಾಲನೆ

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**



ಸಮೀಪದ ಹರ್ಲಾಪೂರದ ಹಠಯೋಗಿ ಕೊಟ್ಟೂರೇಶ್ವರ ಮಹಾಸ್ವಾಮಿಗಳ ಜಾತ್ರಾ ಮಹೋತ್ಸವ ಹಾಗೂ ಪುರಾಣ ಪ್ರಾರಂಭೋತ್ಸವ ಕಾರ್ಯಕ್ರಮವು ಜೂನ್ 17ರಂದು ಸಂಜೆ 6.30ಕ್ಕೆ ನಡೆಯಲಿದೆ.

ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅವರು ಜಾತ್ರಾ ಮಹೋತ್ಸವ ಮತ್ತು ಪುರಾಣ ಪ್ರಾರಂಭೋತ್ಸವವನ್ನು ಉದ್ಘಾಟಿಸಲಿದ್ದಾರೆ. ಕೊತಬಾಳದ ಅಡವಿಸಿದ್ದೇಶ್ವರ ಮಠದ ಗಂಗಾಧರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಮಹಾಲಿಂಗಪುರದ ಚನ್ನವೀರ ಶ್ರೀಗಳು, ಅಡ್ನೂರಿನ ಪಂಚಾಕ್ಷರ ಶಿವಾಚಾರ್ಯರು, ಮಲ್ಲಸಮುದ್ರದ ಫಕ್ಕೀರೇಶ್ವರ ಶ್ರೀಗಳು, ಲಕ್ಕುಂಡಿ ಸಿದ್ಧಲಿಂಗೇಶ್ವರ ಶ್ರೀಗಳು ಸೇರಿದಂತೆ ವಿವಿಧ ಮಠಗಳ ಶ್ರೀಗಳು ಭಾಗವಹಿಸಲಿದ್ದಾರೆ.

ನರಗುಂದ ಶಾಸಕ ಸಿ.ಸಿ. ಪಾಟೀಲ, ಗಂಗಾವತಿ ಶಾಸಕ ಗಾಲಿ ಜನಾರ್ಧನ ರೆಡ್ಡಿ, ಮಾಜಿ ಸಚಿವರಾದ ಶ್ರೀರಾಮುಲು, ಕಳಕಪ್ಪ ಬಂಡಿ, ಶಾಸಕ ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು ಸೇರಿದಂತೆ ಹಲವು ಗಣ್ಯರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಕೀರ್ತನ ಕೇಸರಿ ಗುರುನಾಥ ಶಾಸ್ತ್ರಿಗಳು ಪುರಾಣ ಪ್ರವಚನ ನಡೆಸಲಿದ್ದು, ಕೆ.ಬಿ. ವೀರಾಪೂರ ಹಾಗೂ ಮಂಜುನಾಥ ಅರ್ಕಸಾಲಿ ಸಂಗೀತ ಸೇವೆ ನೀಡಲಿದ್ದಾರೆ ಎಂದು ಜಾತ್ರಾ ಸಮಿತಿ ಪ್ರಕಟಣೆಯಲ್ಲಿ ತಿಳಿಸಿದೆ.

### ನರೇಗಲ್ಲದಲ್ಲಿ ನಿರ್ಮಾಣಕ್ಕೆ ದತ್ತಭಕ್ತ ಮಂಡಳಿಯಿಂದ ಸಂಕಲ್ಪ

# ಬ್ರಹ್ಮ ಸಮಾಜಕ್ಕೆ ₹1.5 ಕೋಟಿ ವೆಚ್ಚದ ಮಂಗಲ ಭವನ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ರೋಣ ಹಾಗೂ ಗಜೇಂದ್ರಗಡ ತಾಲೂಕುಗಳ ಬ್ರಹ್ಮ ಸಮಾಜದವರ ಮಂಗಲ ಕಾರ್ಯಗಳಿಗೆ ಅನುಕೂಲವಾಗುವಂತೆ ಸುಮಾರು ₹1.5 ಕೋಟಿ ವೆಚ್ಚದಲ್ಲಿ ಸುಸಜ್ಜಿತ ದತ್ತಾತ್ರೇಯ ಮಂಗಲ ಭವನ ನಿರ್ಮಿಸಲು ನರೇಗಲ್ಲದ ದತ್ತಭಕ್ತ ಮಂಡಳಿ ಸಂಕಲ್ಪ ಮಾಡಿಕೊಂಡಿದ್ದು, ಈ ಕಾರ್ಯಕ್ಕೆ ಎಲ್ಲ ಭಕ್ತರು ಮತ್ತು ದಾನಿಗಳು ಕೈಜೋಡಿಸಬೇಕು ಎಂದು ಮಂಗಲ ಭವನ ನಿರ್ಮಾಣ ಸಮಿತಿಯ ಗೌರವಾಧ್ಯಕ್ಷ ಡಾ. ಗಜಾನನ ಕಾಳೆ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಅಧಿಕ ಮಾಸದ ಅಂಗವಾಗಿ ನಡೆದ ಸಮಾರಂಭದಲ್ಲಿ ಗಣ್ಯರನ್ನು ಸನ್ಮಾನಿಸಿ ಅವರು ಮಾತನಾಡಿದರು.

ಬ್ರಹ್ಮ ಸಮಾಜದವರಿಗೆ ಕೈಗೆಟಕುವ ದರದಲ್ಲಿ ಮಂಗಲ ಕಾರ್ಯಗಳನ್ನು ನೆರವೇರಿಸಲು ಅನುಕೂಲವಾಗುವ ಉದ್ದೇಶದಿಂದ ಈ ಮಂಗಲ ಭವನ ನಿರ್ಮಿಸಲು ನಿರ್ಧರಿಸಲಾಗಿದೆ. ಭಕ್ತರು ಮತ್ತು ದಾನಿಗಳ ಸಹಕಾರ ದೊರೆತರೆ ಯೋಜನೆ ಶೀಘ್ರದಲ್ಲೇ ಸಾಕಾರಗೊಳ್ಳಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಹುಬ್ಬಳ್ಳಿಯ ಅಥರ್ವ ಡೆವಲಪರ್ಸ್‌ನ ಮೃತ್ಯುಂಜಯ ದೇಶಪಾಂಡೆ ಮಾತನಾಡಿ, ನರೇಗಲ್ಲದಂತಹ ಸಣ್ಣ ಪಟ್ಟಣದಲ್ಲಿ ಭವ್ಯ ದತ್ತಾತ್ರೇಯ ದೇವಸ್ಥಾನ ಹಾಗೂ ಬ್ರಹ್ಮ ಸಮಾಜದ ಒಗ್ಗಟ್ಟನ್ನು ಕಂಡು ಸಂತಸವಾಗಿದೆ. ನಿರ್ಮಾಣಗೊಳ್ಳಲಿರುವ ಮಂಗಲ ಭವನ ಶೀಘ್ರ ಪೂರ್ಣಗೊಂಡು ಜನಸೇವೆಗೆ ಅಣಿಯಾಗಲಿ. ಶ್ರೀ ದತ್ತನ ಕೃಪೆಯಿಂದ ತಮ್ಮ ಕೈಲಾದ ಸಹಾಯ-ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ದತ್ತಭಕ್ತ ಮಂಡಳಿಯ ಅಧ್ಯಕ್ಷ ಡಾ. ನಾಗರಾಜ ಮಾತನಾಡಿ, ಮಂಗಲ ಭವನ ನಿರ್ಮಾಣಕ್ಕಾಗಿ ಪ್ರತ್ಯೇಕ ನಿರ್ಮಾಣ ಹಾಗೂ ಮೇಲ್ವಿಚಾರಣಾ ಸಮಿತಿಗಳನ್ನು ರಚಿಸಲಾಗಿದ್ದು, ಕಾಮಗಾರಿ ಶೀಘ್ರ ಆರಂಭಗೊಳ್ಳಲಿದೆ. ದಾನಿಗಳು ಉದಾರವಾಗಿ ಸಹಕರಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸುಧೀಂದ್ರ ದೇಶಪಾಂಡೆ ಅವರನ್ನು ಸನ್ಮಾನಿಸಲಾಯಿತು. ವಿಶ್ವನಾಥಭಟ್ಟ ವೈದ್ಯ, ಆದರ್ಶ ಕುಲಕರ್ಣಿ, ಪ್ರಶಾಂತ ಗ್ರಾಮಪುರೋಹಿತ, ರಘುನಾಥ ಕೊಂಡಿ, ಶ್ರೀವಲ್ಲಭಭಟ್ಟ ಸದರಜೋಷಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.



> "ರೋಣ ಮತ್ತು ಗಜೇಂದ್ರಗಡ ಭಾಗದ ಬ್ರಹ್ಮ ಸಮಾಜದವರಿಗೆ ಅನುಕೂಲವಾಗುವಂತೆ ಮಂಗಲ ಭವನ ನಿರ್ಮಿಸಲು ಸಂಕಲ್ಪ ಮಾಡಿದ್ದೇವೆ. ಭಕ್ತರು ಹಾಗೂ ದಾನಿಗಳ ಸಹಕಾರ ದೊರೆತರೆ ಈ ಕನಸು ಶೀಘ್ರದಲ್ಲೇ ನನಸಾಗಲಿದೆ."
> **– ಡಾ. ಗಜಾನನ ಕಾಳೆ,** ಗೌರವಾಧ್ಯಕ್ಷರು, ಮಂಗಲ ಭವನ ನಿರ್ಮಾಣ ಸಮಿತಿ

### ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ, ಸಾಧಕರಿಗೆ ಸನ್ಮಾನ

# ಪ್ರೊ. ಬಿ. ಕೃಷ್ಣಪ್ಪ 89ನೇ ಜನ್ಮದಿನ ಆಚರಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ದಲಿತ ಸಂಘರ್ಷ ಸಮಿತಿ (ರಿ) ಜಿಲ್ಲಾ ಸಮಿತಿ ಗದಗ ವತಿಯಿಂದ ಪ್ರೊ. ಬಿ. ಕೃಷ್ಣಪ್ಪ ಅವರ 89ನೇ ಜನ್ಮದಿನಾಚರಣೆಯ ಅಂಗವಾಗಿ 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಅತಿಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನ ಕಾರ್ಯಕ್ರಮವನ್ನು ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಶನಿವಾರ ಆಯೋಜಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಸಂಚಾಲಕ ದುರಗಪ್ಪ ಎಲ್.ಎಚ್. ವಹಿಸಿದ್ದರು. ಡಿಎಸ್‌ಎಸ್ ರಾಜ್ಯ ಸಂಚಾಲಕ ಎಂ. ಗುರುಮೂರ್ತಿ ಹಾಗೂ ರಾಜ್ಯ ಸಂಘಟನಾ ಸಂಚಾಲಕ ಎಸ್.ಎನ್. ಬಳ್ಳಾರಿ ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಮುಖ್ಯ ಅತಿಥಿಗಳಾಗಿ ರಾಜ್ಯ ಸಂಘಟನಾ ಸಂಚಾಲಕ (ಆಂತರಿಕ ಶಿಸ್ತು ಮತ್ತು ತರಬೇತಿ ವಿಭಾಗ) ಹನಮಂತಪ್ಪ ಕಾಕರಗಲ್ ಭಾಗವಹಿಸಿ, ಶಿಕ್ಷಣ ಮತ್ತು ಸಾಮಾಜಿಕ ಜಾಗೃತಿಯ ಮೂಲಕ ಸಮಾಜದಲ್ಲಿ ಪರಿವರ್ತನೆ ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಗಣ್ಯರಿಗೂ ಸನ್ಮಾನಿಸಿ ಅಭಿನಂದಿಸಲಾಯಿತು.

ತಾಲೂಕು ಸಂಚಾಲಕ ಸೋಮಪ್ಪ ಶಿ. ಹೈತಾಪೂರ ಕಾರ್ಯಕ್ರಮ ನಿರೂಪಿಸಿದರು. ಜಿಲ್ಲಾ ಸಂಘಟನಾ ಸಂಚಾಲಕ ಸತೀಶ ಹುಲಿ ಸ್ವಾಗತಿಸಿದರು. ಗದಗ ಜಿಲ್ಲಾ ದಲಿತ ಕಲಾ ಮಂಡಳಿಯಿಂದ ಕ್ರಾಂತಿಗೀತೆಗಳ ಗಾಯನ ನಡೆಯಿತು. ಜಿಲ್ಲಾ ಸಂಘಟನಾ ಸಂಚಾಲಕ ಮಂಜುನಾಥ ಎಂ. ಬುರಡಿ ವಂದನಾರ್ಪಣೆ ಸಲ್ಲಿಸಿದರು.



> "ಶಿಕ್ಷಣವೇ ಸಾಮಾಜಿಕ ಪರಿವರ್ತನೆಯ ಪ್ರಬಲ ಅಸ್ತ್ರ. ವಿದ್ಯಾರ್ಥಿಗಳ ಸಾಧನೆಯನ್ನು ಗುರುತಿಸಿ ಪ್ರೋತ್ಸಾಹಿಸುವುದು ಸಮಾಜದ ಜವಾಬ್ದಾರಿಯಾಗಿದೆ."
> – ಹನಮಂತಪ್ಪ ಕಾಕರಗಲ್

### ವಿದ್ಯುತ್ ಪೂರೈಕೆ ಮೇಲ್ದರ್ಜೆಗೇರಿಸಿ ಹೆಸ್ಕಾಂಗೆ ನಿರ್ವಹಣೆ ವಹಿಸಲು ಮನವಿ

# ಎಪಿಎಂಸಿ ಅಭಿವೃದ್ಧಿಗೆ ವಾಣಿಜ್ಯೋದ್ಯಮ ಸಂಸ್ಥೆ ಒತ್ತಾಯ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಎಪಿಎಂಸಿ ಉಪಸಮಿತಿಯ ನಿಯೋಗವು ಗದಗ ಎಪಿಎಂಸಿ ಕಾರ್ಯದರ್ಶಿ ಶ್ರೀಮತಿ ಸುವರ್ಣ ನಾಯಕ ಹಾಗೂ ಬೆಂಗಳೂರಿನಿಂದ ಆಗಮಿಸಿದ್ದ ಮಾರುಕಟ್ಟೆ ಇಲಾಖೆಯ ವಿದ್ಯುತ್ ವಿಭಾಗದ ಮುಖ್ಯ ಅಭಿಯಂತರ ಪೂಜಾರ ಮತ್ತು ಕಿರಿಯ ಸಹಾಯಕ ಅಭಿಯಂತರ ನಂದೀಶ ಅವರನ್ನು ಭೇಟಿ ಮಾಡಿ ಎಪಿಎಂಸಿ ಯಾರ್ಡ್‌ನ ವಿದ್ಯುತ್ ವ್ಯವಸ್ಥೆಯನ್ನು ಹೆಸ್ಕಾಂ ಇಲಾಖೆಗೆ ಹಸ್ತಾಂತರಿಸುವಂತೆ ಹಾಗೂ ವಿದ್ಯುತ್ ಪೂರೈಕೆಯನ್ನು ಮೇಲ್ದರ್ಜೆಗೆ ಪರಿವರ್ತಿಸುವಂತೆ ಮನವಿ ಸಲ್ಲಿಸಿತು.

ನಿಯೋಗದ ನೇತೃತ್ವ ವಹಿಸಿದ್ದ ಎಪಿಎಂಸಿ ಉಪಸಮಿತಿ ಅಧ್ಯಕ್ಷ ಈಶ್ವರಪ್ಪ ಮುನವಳ್ಳಿ ಮಾತನಾಡಿ, ಮಾರುಕಟ್ಟೆಯಲ್ಲಿ ರೈತರಿಗೆ ಆಹಾರ ಧಾನ್ಯಗಳ ಸ್ವಚ್ಛತೆ, ಗ್ರೈಂಡಿಂಗ್ ಹಾಗೂ ಇತರೆ ಸಂಸ್ಕರಣಾ ಸೌಲಭ್ಯಗಳನ್ನು ಒದಗಿಸಲು ಹೆಚ್ಚಿನ ಸಾಮರ್ಥ್ಯದ ವಿದ್ಯುತ್ ಪೂರೈಕೆಯ ಅಗತ್ಯವಿದೆ. ಈ ಹಿನ್ನೆಲೆಯಲ್ಲಿ ವಿದ್ಯುತ್ ವ್ಯವಸ್ಥೆಯನ್ನು ಮೇಲ್ದರ್ಜೆಗೆ ಪರಿವರ್ತಿಸಿ ಹೆಸ್ಕಾಂ ಇಲಾಖೆಯ ನಿರ್ವಹಣೆಗೆ ಹಸ್ತಾಂತರಿಸಬೇಕು ಎಂದು ಒತ್ತಾಯಿಸಿದರು.

ಮನವಿಗೆ ಸ್ಪಂದಿಸಿದ ಮಾರುಕಟ್ಟೆ ಇಲಾಖೆಯ ವಿದ್ಯುತ್ ವಿಭಾಗದ ಮುಖ್ಯ ಅಭಿಯಂತರ ಪೂಜಾರ ಅವರು, ಹೆಸ್ಕಾಂ ಇಲಾಖೆಯೊಂದಿಗೆ ಆದಷ್ಟು ಶೀಘ್ರದಲ್ಲಿ ಒಡಂಬಡಿಕೆ ಮಾಡಿಕೊಂಡು ಎಪಿಎಂಸಿ ಮಾರುಕಟ್ಟೆಯಲ್ಲಿ ಉನ್ನತ ಮಟ್ಟದ ವಿದ್ಯುತ್ ಪೂರೈಕೆಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ನಿಯೋಗದಲ್ಲಿ ಸಂಸ್ಥೆಯ ಉಪಾಧ್ಯಕ್ಷ ಜಯದೇವ ಮೆಣಸಗಿ, ಪ್ರಕಾಶ ಉಗಲಾಟ, ಸಿದ್ರಾಮಪ್ಪ ಉಮಚಗಿ, ಸಹಕಾರ್ಯದರ್ಶಿಗಳಾದ ರಾಘವೇಂದ್ರ, ಅಶೋಕ ಸಂಕಣ್ಣವರ, ಅರವಿಂದ ಕಾಮತ, ವೀರಣ್ಣ ಕಾಡಪ್ಪನವರ ಹಾಗೂ ಪ್ರಮೋದ ವಾರ್ಕರ ಉಪಸ್ಥಿತರಿದ್ದರು.

ಈ ಕುರಿತು ಸಂಸ್ಥೆಯ ಗೌರವ ಕಾರ್ಯದರ್ಶಿ ಚನ್ನವೀರಪ್ಪ ಹುಣಸಿಕಟ್ಟಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

> "ಎಪಿಎಂಸಿ ಮಾರುಕಟ್ಟೆಯಲ್ಲಿ ರೈತರಿಗೆ ಸಂಸ್ಕರಣಾ ಘಟಕಗಳ ಸೌಲಭ್ಯ ಕಲ್ಪಿಸಲು ವಿದ್ಯುತ್ ಪೂರೈಕೆಯನ್ನು ಮೇಲ್ದರ್ಜೆಗೆ ಪರಿವರ್ತಿಸುವುದು ಅಗತ್ಯವಾಗಿದೆ. ಇದರಿಂದ ರೈತರಿಗೆ ಹೆಚ್ಚಿನ ಅನುಕೂಲವಾಗಲಿದೆ."
> **– ಈಶ್ವರಪ್ಪ ಮುನವಳ್ಳಿ,** ಎಪಿಎಂಸಿ ಉಪಸಮಿತಿ ಅಧ್ಯಕ್ಷರು

### ನರೇಗಲ್ಲದಲ್ಲಿ ವಿದ್ಯಾರ್ಥಿಗಳಿಗೆ ಆರೋಗ್ಯ ಶಿಕ್ಷಣ ಕಾರ್ಯಕ್ರಮ

# ಮಲೇರಿಯಾ ತಡೆಗೆ ಜಾಗೃತಿ ಅಗತ್ಯ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮಲೇರಿಯಾ ವಿರೋಧಿ ಮಾಸಾಚರಣೆ ಅಂಗವಾಗಿ ನಿಡಗುಂದಿ ಪ್ರಾಥಮಿಕ ಆರೋಗ್ಯ ಕೇಂದ್ರದ ವತಿಯಿಂದ ಸೋಮವಾರ ಪಟ್ಟಣದ ಶ್ರೀ ಕೃಷ್ಣಾಜಿ ರಂಗರಾವ್ ಕುಲಕರ್ಣಿ ಸರ್ಕಾರಿ ಪ್ರೌಢಶಾಲೆಯಲ್ಲಿ ಮಲೇರಿಯಾ ಕುರಿತು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಆಡಳಿತ ವೈದ್ಯಾಧಿಕಾರಿ ಡಾ. ಚಿದಾನಂದ ಮುಂಡಾಸದ ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಈ ವರ್ಷದ ಘೋಷವಾಕ್ಯವಾದ "ಮಲೇರಿಯಾ ಅಂತ್ಯಗೊಳಿಸಲು ಸಂಕಲ್ಪ ಮಾಡೋಣ, ನಮಗಿದು ಸಾಧ್ಯವಿದೆ, ನಾವು ಇದನ್ನು ಮಾಡಲೇಬೇಕು" ಎಂಬ ಸಂದೇಶವನ್ನು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ತಲುಪಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಪಾಲ್ಗೊಂಡ ಆರೋಗ್ಯ ಶಿಕ್ಷಣಾಧಿಕಾರಿ ಸಂಗಪ್ಪ ಬೆನ್ನೂರು ಅವರು ಮಲೇರಿಯಾ ಕುರಿತು ಮಾಹಿತಿ ನೀಡಿದರು. ಮಲೇರಿಯಾ ಸೋಂಕಿತ ಹೆಣ್ಣು ಅನಾಫಿಲಿಸ್ ಸೊಳ್ಳೆಗಳ ಕಡಿತದಿಂದ ಹರಡುವ ಗಂಭೀರ ಪರಾವಲಂಬಿ ರೋಗವಾಗಿದ್ದು, ಜ್ವರ, ಚಳಿ, ತಲೆನೋವು, ವಾಕರಿಕೆ ಹಾಗೂ ದೇಹ ನೋವು ಇದರ ಪ್ರಮುಖ ಲಕ್ಷಣಗಳಾಗಿವೆ ಎಂದು ತಿಳಿಸಿದರು.

ಪ್ಲಾಸ್ಮೋಡಿಯಂ ಎಂಬ ಪರಾವಲಂಬಿಯಿಂದ ಮಲೇರಿಯಾ ಉಂಟಾಗುತ್ತದೆ. ಸೊಳ್ಳೆ ಕಡಿತದ ಮೂಲಕ ಸೋಂಕು ಹರಡುವುದರಿಂದ ಮನೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳನ್ನು ಸ್ವಚ್ಛವಾಗಿಟ್ಟುಕೊಳ್ಳುವುದು, ನೀರು ನಿಲ್ಲದಂತೆ ನೋಡಿಕೊಳ್ಳುವುದು, ಸೊಳ್ಳೆ ಪರದೆಗಳ ಬಳಕೆ ಮತ್ತು ಸೊಳ್ಳೆ ನಿವಾರಕ ಕ್ರಮಗಳನ್ನು ಅನುಸರಿಸುವುದು ಅಗತ್ಯ ಎಂದು ಅವರು ಹೇಳಿದರು. ಸಮಯೋಚಿತ ರೋಗನಿರ್ಣಯ ಮತ್ತು ಚಿಕಿತ್ಸೆಯಿಂದ ಮಲೇರಿಯಾವನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಬಹುದು ಎಂದರು.

ಈ ಸಂದರ್ಭದಲ್ಲಿ ಮಾತನಾಡಿದ ಮಂಜುನಾಥ ಜಾಲಿಹಾಳ, ಆರೋಗ್ಯ ಇಲಾಖೆಯ ಇಂತಹ ಜಾಗೃತಿ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ಆರೋಗ್ಯದ ಬಗ್ಗೆ ಅರಿವು ಮೂಡಿಸುವುದರ ಜೊತೆಗೆ ಸಮಾಜದಲ್ಲಿ ಸಾಂಕ್ರಾಮಿಕ ರೋಗಗಳ ತಡೆಗೂ ಸಹಕಾರಿಯಾಗುತ್ತವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಲ್ಲಪ್ಪ ಅಂದಪ್ಪ ಬೂದಿಹಾಳ, ಸಂಗೀತಾ ಮುಚಖಂಡಿ, ವಿಜಯಲಕ್ಷ್ಮಿ ಪೋಲಿಸ್ ಪಾಟೀಲ, ರೇಷ್ಮಾ ಓಲೆಕಾರ, ರಹಿಮತ್ ಭಾನು, ಚಂದ್ರು ಗಂಗರಗೊಂಡ ಸೇರಿದಂತೆ ಆರೋಗ್ಯ ಇಲಾಖೆ ಸಿಬ್ಬಂದಿ ಭಾಗವಹಿಸಿದ್ದರು. ಶಾಲೆಯ ಶಿಕ್ಷಕರಾದ ಎಸ್.ಬಿ. ನಿಡಗುಂದಿ, ಬಿ.ಟಿ. ತಾಳೆ, ಡಿ.ಎಸ್. ಬಡಿಗೇರ ಹಾಗೂ ಎಸ್.ಎಂ. ಹಳ್ಳದ ಉಪಸ್ಥಿತರಿದ್ದರು.

ವಿದ್ಯಾರ್ಥಿಗಳಲ್ಲಿ ಮಲೇರಿಯಾ ತಡೆಗಟ್ಟುವಿಕೆ ಕುರಿತು ಅರಿವು ಮೂಡಿಸುವ ಮೂಲಕ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಕಾರ್ಯಕ್ರಮದಲ್ಲಿ ಕರೆ ನೀಡಲಾಯಿತು.



> "ಮನೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳುವುದು, ಸೊಳ್ಳೆ ನಿಯಂತ್ರಣ ಕ್ರಮಗಳನ್ನು ಅನುಸರಿಸುವುದು ಮತ್ತು ರೋಗ ಲಕ್ಷಣಗಳು ಕಂಡುಬಂದ ತಕ್ಷಣ ಚಿಕಿತ್ಸೆ ಪಡೆಯುವುದು ಮಲೇರಿಯಾ ನಿಯಂತ್ರಣಕ್ಕೆ ಅತ್ಯಂತ ಪರಿಣಾಮಕಾರಿ ಮಾರ್ಗವಾಗಿದೆ."
> **– ಸಂಗಪ್ಪ ಬೆನ್ನೂರು,** ಆರೋಗ್ಯ ಶಿಕ್ಷಣಾಧಿಕಾರಿ

# ಪ್ರಜಾಪ್ರಭುತ್ವ ರಕ್ಷಣೆಗೆ ಜನಜಾಗೃತಿ ಅಗತ್ಯ

▸▸ ಮೊದಲನೇ ಪುಟದಿಂದ

ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಕುರಿತು ಮಾತನಾಡಿದ ಅವರು, ಅರ್ಹ ಮತದಾರರ ಹೆಸರು ಪಟ್ಟಿಯಲ್ಲಿ ಸೇರ್ಪಡೆಯಾಗುವಂತೆ ಕಾರ್ಯಕರ್ತರು ಮನೆಮನೆಗೆ ತೆರಳಿ ಜಾಗೃತಿ ಮೂಡಿಸಬೇಕು ಎಂದು ಸಲಹೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಫ್ಘಾನ್ ಅಲಿ ಮಧ್ಯಂತರ ವರದಿ ಮಂಡಿಸಿದರು. ಬಳಿಕ ಜಿಲ್ಲೆಯ ವಿವಿಧ ಸಾರ್ವಜನಿಕ ಸಮಸ್ಯೆಗಳ ಕುರಿತು ಮಹತ್ವದ ನಿರ್ಣಯಗಳನ್ನು ಕೈಗೊಳ್ಳಲಾಯಿತು.

ಸಭೆಯಲ್ಲಿ ವಿಮೆನ್ ಇಂಡಿಯಾ ಮೂವ್ಮೆಂಟ್ ಜಿಲ್ಲಾಧ್ಯಕ್ಷೆ ಸುಮಯ್ಯ, ಜಿಲ್ಲಾ ಸಮಿತಿ ಸದಸ್ಯರು ಹಾಗೂ ವಿವಿಧ ವಿಧಾನಸಭಾ ಕ್ಷೇತ್ರಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

**ಪ್ರಮುಖ ನಿರ್ಣಯಗಳು**

- ಗದಗ ಜಿಲ್ಲಾ ಆಸ್ಪತ್ರೆಯಲ್ಲಿ ಮೂಲಭೂತ ವೈದ್ಯಕೀಯ ಸೌಲಭ್ಯಗಳನ್ನು ವಿಸ್ತರಿಸಬೇಕು.
- ಹೊಂಬಳ ನಾಕಾ ಫ್ಲೈಓವರ್ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಬೇಕು.
- ಬೈಪಾಸ್ ಮೂಲಕ ಸಂಚರಿಸುವ ರೈಲುಗಳನ್ನು ಗದಗ ಜಂಕ್ಷನ್ ಮೂಲಕ ಓಡಿಸಲು ಕ್ರಮ ಕೈಗೊಳ್ಳಬೇಕು.
- ಗದಗ ನಗರದ ರಸ್ತೆ ಕಾಮಗಾರಿಗಳನ್ನು ಮುಂಗಾರು ಮುನ್ನ ಪೂರ್ಣಗೊಳಿಸಬೇಕು.
- ಗದಗ-ನರಗುಂದ ರಸ್ತೆಯ ಕುಸಿದ ಭಾಗದಲ್ಲಿ ಹೊಸ ಸೇತುವೆ ನಿರ್ಮಾಣವನ್ನು ತ್ವರಿತಗೊಳಿಸಬೇಕು.
- ಮಳೆ ಹಾನಿಯಿಂದ ಮನೆ ಕಳೆದುಕೊಂಡವರಿಗೆ ಶಾಶ್ವತ ವಸತಿ ಸೌಲಭ್ಯ ಕಲ್ಪಿಸಬೇಕು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka